ಶ್ರೀ

ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 105 RNI Number : KNKAN/25/A2770 24-04-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :105 ರಾಯಚೂರು 24-04-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ಎಸ್‌ಎಸ್‌ಎಲ್‌ಸಿ ಫಲಿತಾಂಶ:ರಾಜ್ಯಕ್ಕೆ ಟಾಪರ್ ಆದ ವಿದ್ಯಾರ್ಥಿಗಳು

ಬೆಳಗಾವಿ: ಅಥಣಿ ತಾಲೂಕಿನ ಕಟಗೇರಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ಪ್ರಾರ್ಥನಾ ನಾಗಪ್ಪ ಬಿರಾದರ್ ಪಾಟೀಲ್ ಎಸ್‌ಎಸ್‌ಎಲ್‌ಸಿಯಲ್ಲಿ 625ಕ್ಕೆ 625 ಅಂಕ ಗಳಿಸುವ ಮೂಲಕ ರಾಜ್ಯಕ್ಕೆ ಟಾಪರ್ ಆಗಿ ಹೊರಹೊಮ್ಮಿದ್ದಾರೆ.

ಅಪ್ಪಟ ಗ್ರಾಮೀಣ ಪ್ರದೇಶದ ವಿದ್ಯಾರ್ಥಿನಿ ಆಗಿರುವ ಪ್ರಾರ್ಥನಾ ರಾಜ್ಯಕ್ಕೆ ಟಾಪರ್ ಆಗುವ ಮೂಲಕ ಬೆಳಗಾವಿ ಜಿಲ್ಲೆಯ ಕೀರ್ತಿ ಹೆಚ್ಚಿಸಿದ್ದಾರೆ. ಪ್ರಾರ್ಥನಾ ತಂದೆ ನಾಗಪ್ಪ ಅದೇ ಶಾಲೆಯ ಕನ್ನಡ ಭಾಷಾ ಶಿಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದರೆ, ತಾಯಿ ವಿನೋದಾ ಗೃಹಿಣಿಯಾಗಿದ್ದಾರೆ.

ಪ್ರಸಕ್ತ ವರ್ಷ ಬೆಳಗಾವಿ ಶೈಕ್ಷಣಿಕ ಜಿಲ್ಲೆಗೆ 18ನೇ ಸ್ಥಾನ ಸಿಕ್ಕಿದ್ದು, ಶೇ. 94.75ರಷ್ಟು ಫಲಿತಾಂಶ ದಾಖಲಾಗಿದೆ. ಕಳೆದ ವರ್ಷ ಶೇ.80.48ರಷ್ಟು ಫಲಿತಾಂಶ ಬಂದಿತ್ತು. ಇದರಿಂದ ಹಿಂದಿನ ವರ್ಷಕ್ಕೆ ಹೋಲಿಸಿದರೆ, ಶೇ.14.27ರಷ್ಟು ಫಲಿತಾಂಶ ಹೆಚ್ಚಳವಾಗಿದೆ. ಚಿಕ್ಕೋಡಿ 23ನೇ ಸ್ಥಾನ ಪಡೆದಿದ್ದು, ಶೇ.94.04 ಫಲಿತಾಂಶ ದಾಖಲಾಗಿದೆ. ಕಳೆದ ವರ್ಷ 79.94ರಷ್ಟು ಫಲಿತಾಂಶ ಸಿಕ್ಕಿತ್ತು. ಹಿಂದಿನ ವರ್ಷಕ್ಕೆ ಹೋಲಿಸಿದರೆ 14.15ರಷ್ಟು ಹೆಚ್ಚಳವಾಗಿದೆ.

ಟಾಪರ್ ಪ್ರಾರ್ಥನಾ ಅವರನ್ನು ಮಾತನಾಡಿಸಿದ್ದು, 620 ಅಂಕ ಬರುವ ನಿರೀಕ್ಷೆ ಇಟ್ಟುಕೊಂಡಿದ್ದೆ. ಆದರೆ, 625 ಅಂಕ ಪಡೆದಿದ್ದಕ್ಕೆ ತುಂಬಾ ಖುಷಿ ಆಗುತ್ತಿದೆ. ಎಲ್ಲಾ ಶಿಕ್ಷಕರು ನನಗೆ ಬಹಳಷ್ಟು ಪ್ರೋತ್ಸಾಹ ಮಾಡಿದರು.



ತಂದೆ-ತಾಯಿ ಬೆಂಬಲದಿಂದ ಇದು ಸಾಧ್ಯವಾಗಿದೆ. ಮುಂದೆ ಪಿಯುಸಿ ಸೈನ್ಸ್ ಸೇರಿಕೊಂಡು, ಬಳಿಕ ವೈದ್ಯೆ ಅಥವಾ ಯುಪಿಎಸ್‌ಸಿ ಪರೀಕ್ಷೆ ಎದುರಿಸುವ ಗುರಿ ಹೊಂದಿದ್ದೇನೆ ಎಂದು ತಮ್ಮ ಭವಿಷ್ಯದ ಗುರಿ ಬಗ್ಗೆ ಹಂಚಿಕೊಂಡರು.

ಏಕಾಗ್ರತೆಯಿಂದ ಪಾಠ ಕೇಳಿದ್ದೆ. ಇದರಿಂದ ಅಲ್ಲಿಯೇ ಶೇ.80ರಷ್ಟು ಅರ್ಥ ಆಗುತ್ತಿತ್ತು. ಬಳಿಕ ಮನೆಗೆ ಹೋದ ಮೇಲೆ ಶೇ.20ರಷ್ಟು ಪೂರ್ಣ ಆಗುತ್ತಿತ್ತು. ಒಮ್ಮೆ ಓದಿ ಬಿಟ್ಟು ಬಿಡುತ್ತಿರಲಿಲ್ಲ. ಪಠ್ಯವನ್ನು ಪುನರ್ ಮನನ ಮಾಡಿದ್ದರಿಂದಲೇ 625 ಅಂಕ ಗಳಿಸಲು ಸಾಧ್ಯವಾಗಿದೆ ಎಂದು ತನ್ನ ಓದಿನ ಕ್ರಮವನ್ನು ಪ್ರಾರ್ಥನಾ ವಿವರಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಆರ್.ಮುಂಜೆ ಮಾತನಾಡಿ, ನಮ್ಮ ತಾಲೂಕಿನ ವಿದ್ಯಾರ್ಥಿನಿಯ ಸಾಧನೆ ನಮಗೆ ಹರ್ಷ ತಂದಿದೆ. ಇತರ ವಿದ್ಯಾರ್ಥಿನಿಯರಿಗೆ ಮಾದರಿಯಾಗಿದ್ದಾರೆ. ಪರೀಕ್ಷೆಗೆ ಮುಂಚಿತವಾಗಿ ಹಲವು ರೂಪುರೇಷೆಗಳನ್ನು ಸಿದ್ಧಪಡಿಸಿದ್ದರಿಂದ ಈ ಸಾಧನೆ ಮಾಡುವಲ್ಲಿ ನಮ್ಮ ತಾಲೂಕು ಸಫಲವಾಗಿದೆ. ವಿಶೇಷವಾಗಿ, ಸರ್ಕಾರಿ ಶಾಲೆಯಲ್ಲಿ ಕಲಿತು ವಿದ್ಯಾರ್ಥಿನಿ ರಾಜ್ಯಕ್ಕೆ ಪ್ರಥಮ ಸ್ಥಾನ ಬಂದಿರುವುದು ವಿಶೇಷ. ಸರ್ಕಾರಿ ಶಾಲೆ ಎಂದರೆ ಮೂಗು ಮುರಿಯುವವರ ಮಧ್ಯ ಪ್ರಾರ್ಥನಾ ಎಲ್ಲರಿಗೂ ಕೂಡ ಮಾದರಿ ಎಂದು ಹರ್ಷ ವ್ಯಕ್ತಪಡಿಸಿದರು.

ಬಿಲ್ಡಿಂಗ್ ಕಾಂಟ್ರ್ಯಾಕ್ಟರ್ ಪುತ್ರ ಸಹ ಟಾಪರ್: ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲೂಕಿನ ಕಣವೆಬಿಳಚಿ ಗ್ರಾಮದ ಭರತ್ ಎಂಬ ವಿದ್ಯಾರ್ಥಿ 625ಕ್ಕೆ 625 ಅಂಕ ಪಡೆದು ರಾಜ್ಯಕ್ಕೆ ಟಾಪರ್ ಆಗಿದ್ದಾನೆ. ಕಬ್ಬಳ ಗ್ರಾಮದ ಶ್ರೀ ವಿದ್ಯಾಲಕ್ಷ್ಮೀ ಕಾನ್ವೆಂಟ್ ಶಾಲೆಯ ವಿದ್ಯಾರ್ಥಿಯಾಗಿರುವ ಭರತ್, ಬಿಲ್ಡಿಂಗ್ ಕಾಂಟ್ರ್ಯಾಕ್ಟರ್ ಆಗಿರುವ ಗಿರೀಶ್‌ರಾವ್ ಮತ್ತು ಶಿಲ್ಪಾ ದಂಪತಿಯ ಪುತ್ರರಾಗಿದ್ದಾರೆ.

ಪುತ್ರನ ಸಾಧನೆ ಕುರಿತು ಈಟಿವಿ ಭಾರತದೊಂದಿಗೆ ಮಾತನಾಡಿರುವ ಗಿರೀಶ್‌ರಾವ್, ಬಹಳ ಖುಷಿ ಆಗುತ್ತಿದೆ. ನಾನು ಮೂಲತಃ ಕೃಷಿಕ. ಕೃಷಿಯಲ್ಲಿ ಕೆಲಸ ಇಲ್ಲದಾಗ ಕಾಂಟ್ರ್ಯಾಕ್ಟರ್ ಆಗಿ ಕೆಲಸ ಮಾಡುತ್ತೇನೆ. ನನ್ನ ಮಗ ಚೆನ್ನಾಗಿ ಓದುತ್ತಿದ್ದ. ಪ್ರತಿದಿನ ಶಾಲೆಯಿಂದ ಬಂದ ನಂತರ ಸ್ವಲ್ಪ ವಿಶ್ರಾಂತಿ ಪಡೆದು ವಿದ್ಯಾಭ್ಯಾಸದಲ್ಲಿ ತೊಡಗುತ್ತಿದ್ದ. ಶಾಲೆಯ ಎಲ್ಲಾ ಪರೀಕ್ಷೆಗಳಲ್ಲಿ ಮೊದಲಿನಿಂದಲೂ ಔಟ್ ಆಫ್ ಔಟ್ ಬರುತ್ತಿದ್ದ. ಬೋರ್ಡ್ ಪರೀಕ್ಷೆಯಲ್ಲಿ ಎರಡು ಅಂಕ ಕಡಿಮೆ ಬರಬಹುದೆಂದು ನನ್ನ ಬಳಿ ಹೇಳುತ್ತಿದ್ದ. ಚಿಂತೆ ಮಾಡದಂತೆ ತಿಳಿ ಹೇಳಿದ್ದೆ. ಇದೀಗ ಟಾಪರ್ ಆಗಿದ್ದಾನೆ. ಸೈನ್ಸ್ ಮಾಡಿ ನೀಟ್ ಬರೆಯಬೇಕೆಂದು ಆಸೆ ವ್ಯಕ್ತಪಡಿಸಿದ್ದಾನೆ. ಚೆನ್ನಾಗಿ ಓದುತ್ತಿದ್ದ ಎನ್ನುವುದಕ್ಕಿಂತ ಅವನಲ್ಲಿ ಟ್ಯಾಲೆಂಟ್ ಚೆನ್ನಾಗಿದೆ ಎಂದರು.

ಮಾನ್ವಿ ಪಟ್ಟಣದ ಸುಖದೇವ್ ಟಾಪರ್: ರಾಯಚೂರಿನ ಮಾನ್ವಿ ಪಟ್ಟಣದ ಬಿವಿಆರ್ ಇಂಗ್ಲಿಷ್ ಮಾಧ್ಯಮ ಶಾಲೆಯ ವಿದ್ಯಾರ್ಥಿ ಸುಖದೇವ್ ಕೂಡ 625ಕ್ಕೆ 625 ಅಂಕ ಪಡೆದು ರಾಜ್ಯಕ್ಕೆ ಟಾಪರ್ ಆಗಿದ್ದಾರೆ. ಪುತ್ರನ ಸಾಧನೆಗೆ ತಂದೆ ಡಾ. ಪರಶುರಾಮ್, ಶಾಲಾ ಆಡಳಿತ ಮಂಡಳಿ, ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಶುಭಹಾರೈಸಿದರು.

ಟಾಪರ್ ಆದ ಕುಂದಾಪುರದ ಪ್ರೀತವ್ ಜಿ.ಪೂಜಾರಿ, ಮುದ್ದೇಬಿಹಾಳದ ಸೌಜನ್ಯಾ ಹಾಗೂ ಮಾನ್ವಿಯ ಸುಖದೇವ್ ( )

ಕುಂದಾಪುರದ ಕಂಡಕ್ಟರ್ ಮಗ ಟಾಪರ್: ಇಲ್ಲಿನ ಶಂಕರನಾರಾಯಣ ಮದರ್ ಥೆರೆಸಾ ಮೆಮೋರಿಯಲ್ ಪ್ರೌಢಶಾಲೆಯ ವಿದ್ಯಾರ್ಥಿ ಪ್ರೀತಮ್ ಜಿ.ಪೂಜಾರಿ ಕೂಡ 625ಕ್ಕೆ 625 ಅಂಕ ಪಡೆದು ರಾಜ್ಯದ ಟಾಪರ್‌ಗಳಲ್ಲಿ ಒಬ್ಬರಾಗಿದ್ದಾರೆ.

4 ನೇ ಪುಟಕ್ಕೆ...

ಜಿಲ್ಲಾಡಳಿತದಿಂದ ಶ್ರೀ ಭಗೀರಥ ಜಯಂತಿ ಆಚರಣೆ

ಭಗೀರಥ ಮಹರ್ಷಿಯ ಆದರ್ಶಗಳನ್ನು ಮೈಗೂಡಿಸಿಕೊಳ್ಳಿ: ಜಿ.ಕುಮಾರ್ ನಾಯಕ

ರಾಯಚೂರು,ಏ.23-

ಪ್ರಯತ್ನ ಹಾಗೂ ಸಾಧನೆಯ ದ್ಯೋತಕವಾದ ಭಗೀರಥ ಮಹರ್ಷಿಯ ಆದರ್ಶಗಳನ್ನು ಎಲ್ಲರೂ ಜೀವನದಲ್ಲಿ ಮೈಗೂಡಿಸಿ ಕೊಳ್ಳಬೇಕು ಎಂದು ರಾಯಚೂರು ಲೋಕಸಭಾ ಸದಸ್ಯರಾದ ಜಿ. ಕುಮಾರ್ ನಾಯಕ ಅವರು ಹೇಳಿದರು.

ಏಪ್ರಿಲ್ 23ರ ಗುರುವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಶ್ರೀ ಭಗೀರಥ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



ಭಗೀರಥರು ಪೌರಾಣಿಕ ಪುರುಷರು. ಸಮಾಜದಲ್ಲಿ ಇಂದಿಗೂ ಕಠಿಣ ಪರಿಶ್ರಮಕ್ಕೆ ಭಗೀರಥ ಯತ್ನ ಎಂದೇ ಉದಾಹರಣೆ ನೀಡಲಾಗುತ್ತದೆ. ಭಗೀರಥರು ಎಂದರೆ ಸಾಧನೆಯ ದ್ಯೋತಕವಾಗಿದ್ದು, ಸಾಕ್ಷತ್ ಗಂಗೆಯನ್ನು ಧರೆಗಿಳಿಸಿದ ಮಹಾಪುರುಷರು ಎಂದು ಬಣ್ಣಿಸಿದರು.

ಯಾವುದೇ ಕೆಲಸ ಮಾಡಬೇಕಾದರೆ ಏಕಾಗ್ರತೆಯಿಂದ ಮಾಡಬೇಕು. ಅದಕ್ಕೆ ಶ್ರೀ ಭಗೀರಥ ಮಹರ್ಷಿ ಉದಾಹರಣೆಯಾಗಿದ್ದಾರೆ. ಪೋಷಕರು ಮಕ್ಕಳಿಗೂ ಉತ್ತಮ ಶಿಕ್ಷಣವನ್ನು ನೀಡುವ ಮೂಲಕ ಸಮಾಜವನ್ನು ಬದಲಾವಣೆ ಮಾಡಬೇಕು. ಸರ್ಕಾರದ ವಿವಿಧ ಸೌಲಭ್ಯಗಳನ್ನು ಸರಿಯಾಗಿ ಬಳಕೆ ಮಾಡಿಕೊಂಡು ಸಮಾಜಕ್ಕೆ ಬೇಕಾಗುವ ನೆರವು ನೀಡಲಾಗುತ್ತದೆ ಎಂದರು.

ಈ ವೇಳೆ ರಾಯಚೂರು ತಹಶಿಲ್ದಾರ್ ಸುರೇಶ ವರ್ಮಾ ಅವರು

4 ನೇ ಪುಟಕ್ಕೆ...

ಎಸ್ ಎಸ್ ಎಲ್ ಸಿ ಯಲ್ಲಿ 99.% ಗಳಿಸಿ ರಾಜ್ಯಕ್ಕೆ 6 ನೇ ಜಿಲ್ಲೆಗೆ ದ್ವಿತೀಯ ಸ್ಥಾನ ಪಡೆದ ಸೌಮ್ಯ ಪ್ಯಾಟಿ

ರಾಯಚೂರು, ಏ.23-

ಜಿಲ್ಲೆಯ ಶಕ್ತಿನಗರದ ಕೆಪಿಸಿಎಲ್ ದಾವ್ ಶಾಲೆಯ ವಿದ್ಯಾರ್ಥಿನಿ ಸೌಮ್ಯ ಪ್ಯಾಟಿ ಅವರು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 619 ಅಂಕಗಳನ್ನು ಪಡೆದು 99% ಪಡೆದು ಜಿಲ್ಲೆಗೆ ದ್ವಿತೀಯ ಸ್ಥಾನ ಪಡೆದು ರಾಜ್ಯಕ್ಕೆ 6 ನೇ ಸ್ಥಾನದಲ್ಲಿರುವುದು ಶೈಕ್ಷಣಿಕ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆಯಾಗಿದೆ.



ಈ ಸಾಧನೆಯ ಮೂಲಕ ಅವರು ತಮ್ಮ ಶಾಲೆಗೆ ಮಾತ್ರವಲ್ಲದೆ, ಶಕ್ತಿನಗರ ಹೆಮ್ಮೆಯನ್ನು ತಂದಿದ್ದಾರೆ.

ಸೌಮ್ಯ ಪ್ಯಾಟಿ ಅವರು ಸೂಗಪ್ಪ ಪ್ಯಾಟಿ ಅವರ ಪುತ್ರಿಯಾಗಿದ್ದು, ಸರಳ ಕುಟುಂಬದಲ್ಲಿ ಬೆಳೆದರೂ ತಮ್ಮ ದೃಢ ಸಂಕಲ್ಪ, ಶ್ರಮ ಮತ್ತು ಶಿಸ್ತುಬದ್ಧ ಓದಿನ ಮೂಲಕ ಈ ಉನ್ನತ ಸಾಧನೆಯನ್ನು ಮಾಡಿದ್ದಾರೆ. ದಿನನಿತ್ಯದ ಪಾಠಗಳ ಜೊತೆಗೆ ನಿರಂತರ ಅಭ್ಯಾಸ, ಶಿಕ್ಷಕರ ಮಾರ್ಗದರ್ಶನ ಮತ್ತು ಪೋಷಕರ ಬೆಂಬಲವೇ ತಮ್ಮ ಯಶಸ್ಸಿನ ಗುಟ್ಟು ಎಂದು ಅವರು ತಿಳಿಸಿದ್ದಾರೆ.

ಶಾಲೆಯ ಆಡಳಿತ ಮಂಡಳಿ, ಶಿಕ್ಷಕ ವರ್ಗ ಹಾಗೂ ಸಹಪಾಠಿಗಳು ಸೌಮ್ಯ ಅವರ ಸಾಧನೆಯನ್ನು ಹರ್ಷದಿಂದ ಸ್ವಾಗತಿಸಿ, ಮುಂದಿನ ವಿದ್ಯಾಭ್ಯಾಸದಲ್ಲಿಯೂ ಅವರು ಇನ್ನಷ್ಟು ಸಾಧನೆ ಮಾಡಲಿ ಎಂದು ಹಾರೈಸಿದ್ದಾರೆ. ವಿಶೇಷವಾಗಿ, ಶಿಕ್ಷಕರು ಅವರ ಏಕಾಗ್ರತೆ ಮತ್ತು ಕಲಿಕೆಯ ಮೇಲಿನ ಆಸಕ್ತಿಯನ್ನು ಮೆಚ್ಚಿಕೊಂಡಿದ್ದಾರೆ.

ಸೌಮ್ಯ ಪ್ಯಾಟಿ ಅವರ ಈ ಸಾಧನೆ ಇತರ ವಿದ್ಯಾರ್ಥಿಗಳಿಗೆ ಸ್ಪೂರ್ತಿದಾಯಕವಾಗಿದೆ. ಕಠಿಣ ಪರಿಶ್ರಮ, ಗುರಿಯತ್ತದ ನಿಷ್ಠೆ ಮತ್ತು ಆತ್ಮವಿಶ್ವಾಸ ಇದ್ದರೆ ಯಾವುದೇ ಸಾಧನೆಯೂ ಅಸಾಧ್ಯವಲ್ಲ ಎಂಬುದನ್ನು ಅವರು ತೋರಿಸಿದ್ದಾರೆ. ಗ್ರಾಮೀಣ ಪ್ರದೇಶದಲ್ಲಿದ್ದರೂ ಉತ್ತಮ ಶಿಕ್ಷಣ ಪಡೆದು ರಾಜ್ಯ ಮಟ್ಟದಲ್ಲಿ ಮೆರೆದಿರುವುದು ಯುವ ಪೀಳಿಗೆಗೆ ಪ್ರೇರಣೆಯಾಗಿದೆ.

ಭವಿಷ್ಯದಲ್ಲಿ ಇವರ ಈ ಸಾಧನೆ ಮುಂದಿನ ವಿದ್ಯಾರ್ಥಿಗಳಿಗೆ ದಾರಿದೀಪವಾಗಲಿ ಎಂಬ ಆಶಯ ಎಲ್ಲರಲ್ಲೂ ವ್ಯಕ್ತವಾಗಿದೆ.

ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಕಂಟ್ರೋಲ್ ರೂಮ್ ಆರಂಭ

ರಾಯಚೂರು ಏಪ್ರಿಲ್ 23

ರಾಯಚೂರು ಜಿಲ್ಲೆಯನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಿರುವ ಹಿನ್ನಲೆಯಲ್ಲಿ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ತುರ್ತಾಗಿ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ಜಿಲ್ಲಾ ಪಂಚಾಯತ್ ಮತ್ತು ಜಿಲ್ಲೆಯ ಎಲ್ಲಾ ತಾಲೂಕು ಪಂಚಾಯತಿಗಳಲ್ಲಿ ಕಂಟ್ರೋಲ್ ರೂಮ್ ಪ್ರಾರಂಭಿಸಿದ್ದು, ಸಾರ್ವಜನಿಕರು ಈ ಸೌಲಭ್ಯವನ್ನು ಬಳಕೆ ಮಾಡಿಕೊಳ್ಳಬಹುದಾಗಿದೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಕೋರಿದ್ದಾರೆ.

ಜಿಲ್ಲಾ ಪಂಚಾಯತ್ ರಾಯಚೂರು ದೂರವಾಣಿ ಸಂಖ್ಯೆ: 08532- 230539, ತಾಲೂಕು ಪಂಚಾಯತ್ ರಾಯಚೂರು ಮೊಬೈಲ್ ಸಂಖ್ಯೆ: 9483203052, ತಾಲೂಕು ಪಂಚಾಯತ್ ಮಾನವಿ ದೂರವಾಣಿ ಸಂಖ್ಯೆ: 08538-221551, ತಾಲೂಕು ಪಂಚಾಯತ್ ಸಿಂಧನೂರು ದೂರವಾಣಿ ಸಂಖ್ಯೆ: 08535-230148, ತಾಲೂಕು ಪಂಚಾಯತ್ ಲಿಂಗಸುಗೂರು ಮೊಬೈಲ್ ಸಂಖ್ಯೆ: 9900577921, 9945226423, 9008727961, ತಾಲೂಕು ಪಂಚಾಯತ್ ದೇವದುರ್ಗ ಮೊಬೈಲ್ ಸಂಖ್ಯೆ: 9972353743, 9686645888, ತಾಲೂಕು ಪಂಚಾಯತ್ ಸಿರವಾರ ಮೊಬೈಲ್ ಸಂಖ್ಯೆ: 9535420463, 9632544321, ತಾಲೂಕು ಪಂಚಾಯತ್ ಮಸ್ಕಿ ದೂರವಾಣಿ ಸಂಖ್ಯೆ: 08537-270122, ತಾಲೂಕು ಪಂಚಾಯತ್ ಅರಕೇರಾ ಮೊಬೈಲ್ ಸಂಖ್ಯೆ: 9611856624, 8197182953ಗೆ ಸಂಪರ್ಕ ಮಾಡಿ ಗ್ರಾಮೀಣ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆಯಾದಲ್ಲಿ ಕುಡಿಯುವ ನೀರಿನ ಸಮಸ್ಯೆಯಾದಲ್ಲಿ ತುರ್ತಾಗಿ ಪರಿಹರಿಸಲು ಆಯಾ ತಾಲೂಕಿನ ಸಾರ್ವಜನಿಕರು ಮೇಲ್ಕಂಡ ದೂರವಾಣಿಗಳ ಮೂಲಕ ಸಂಪರ್ಕಸಿ ಪರಿಹಾರ ಪಡೆಯಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಗರದಲ್ಲಿ ತಾಪಮಾನ ಏರಿಕೆ: ಸಾರ್ವಜನಿಕರ ರಕ್ಷಣೆಗಾಗಿ ಶಾಶ್ವತ ನೆರಳು ಹಾಗೂ ನೀರಿನ ವ್ಯವಸ್ಥೆಗೆ ಪ್ರಗತಿಪರ ಸಂಘಟನೆಗಳ ಒತ್ತಾಯ

ರಾಯಚೂರು,ಏ.23-

ನಗರದಲ್ಲಿ ದಿನದಿಂದ ದಿನಕ್ಕೆ ಏರುತ್ತಿರುವ ತಾಪಮಾನದಿಂದ ಸಾರ್ವಜನಿಕರು ಹಾಗೂ ವಾಹನ ಸವಾರರು ತೀವ್ರ ತೊಂದರೆ ಅನುಭವಿಸುತ್ತಿರುವ



ಹಿನ್ನಲೆಯಲ್ಲಿ, ಇಂದು ವಿವಿಧ ಪ್ರಗತಿಪರ ಸಂಘಟನೆಗಳು ಒಗ್ಗೂಡಿ ಮಾನವೀಯ ದೃಷ್ಟಿಕೋನದಿಂದ ಮಹತ್ವದ ಕ್ರಮ ಕೈಗೊಂಡವು.

ಈ ಸಂದರ್ಭದಲ್ಲಿ ಸಂಘಟನೆಗಳ ಪ್ರತಿನಿಧಿಗಳು ನಗರದ ಪ್ರಮುಖ ವೃತ್ತಗಳಾದ ಬಸವೇಶ್ವರ ವೃತ್ತ ಹಾಗೂ ಗಂಜ್ ವೃತ್ತಗಳಿಗೆ ಭೇಟಿ ನೀಡಿ, ಟ್ರಾಫಿಕ್ ಸಿಗ್ನಲ್‌ಗಳಲ್ಲಿ ನಿಲ್ಲುವ ವಾಹನ ಸವಾರರಿಗೆ ಶಾಶ್ವತ ನೆರಳು ಒದಗಿಸುವ ಉದ್ದೇಶದಿಂದ ಪರದೆ (ಶೇಡ್) ವ್ಯವಸ್ಥೆಯನ್ನು ಪರಿಶೀಲಿಸಿ, ಸೂಕ್ತ ಸಲಹೆಗಳನ್ನು ನೀಡಿದರು. ಹೆಚ್ಚುತ್ತಿರುವ ಬಿಸಿಲಿನ ತಾಪಮಾನದಲ್ಲಿ ಸಿಗ್ನಲ್‌ಗಳಲ್ಲಿ ನಿಂತುಕೊಳ್ಳುವ ನಾಗರಿಕರಿಗೆ ನೆರಳು ಸೌಲಭ್ಯ ಅತ್ಯಂತ ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಇದಾದ ನಂತರ ಮಹಾನಗರ ಪಾಲಿಕೆ ಆಯುಕ್ತರನ್ನು ಭೇಟಿ ಮಾಡಿದ ಪ್ರತಿನಿಧಿ ಮಂಡಳಿ, ಈ ಕಾಮಗಾರಿಯನ್ನು ಆದ್ಯತೆಯಿಂದ ಕೈಗೊಂಡು ಶೀಘ್ರದಲ್ಲಿ ಪೂರ್ಣಗೊಳಿಸುವಂತೆ ಮನವಿ ಸಲ್ಲಿಸಿತು. ಜೊತೆಗೆ, ನಗರದಲ್ಲಿನ ಜನನಿಬಿಡ ಪ್ರದೇಶಗಳಲ್ಲಿ ನೀರಿನ ಅರವಟ್ಟಿಗೆ (ಕುಡಿಯುವ ನೀರಿನ ತಾತ್ಕಾಲಿಕ ಕೇಂದ್ರಗಳು) ವ್ಯವಸ್ಥೆ ಮಾಡಬೇಕು ಹಾಗೂ ಪ್ರಮುಖ ರಸ್ತೆಗಳ ಮೇಲೆ ನೀರಿನ ಟ್ಯಾಂಕರ್ ಅಥವಾ ಅಗ್ನಿಶಾಮಕ ವಾಹನಗಳ

4 ನೇ ಪುಟಕ್ಕೆ...

ಗಾಯತ್ರಿ ಭವನದ ನೂತನ ಬಾಗಿಲು ಚೌಕಟ್ಟು

ರಾಯಚೂರು,ಏ.23-

ಇಂದು ರಾಯಚೂರಿನ ನವೋದಯ ಆಸ್ಪತ್ರೆ ಹತ್ತಿರ ಇರುವ ನಮ್ಮ ಬ್ರಾಹ್ಮಣ ಸಮಾಜದ ಹೆಮ್ಮೆಯ ಗಾಯತ್ರಿ ಭವನದ ನೂತನ ಬಾಗಿಲು ಚೌಕಟ್ಟು ಕೂಡಿಸಲಾಯಿತು, ಈ ಒಂದು ಸಂದರ್ಭದಲ್ಲಿ ರಾಯಚೂರು ಜಿಲ್ಲಾ ಪ್ರತಿನಿಧಿಯಾದ ಶ್ರೀ ರಮೇಶ ಕುಲಕರಣಿ, ಜಿಲ್ಲಾ ಸಂಚಾಲಕರಾದ ಶ್ರೀ ವೇಣುಗೋಪಾಲ ಇನಾಮ್ದಾರ್, ಕಾರ್ಯಧ್ಯಕ್ಷರಾದ ವೆಂಕಟೇಶ್ ದೇಸಾಯಿ, ರಾಜ್ಯ ಕಾರ್ಯಕಾರಣಿ ಸದಸ್ಯರಾದ ಜಯಕುಮಾರ ಗಬ್ಬೂರು, ನಗರ ಸಂಚಾಲಕರಾದ ರಾಮರಾವ್ ಗಣೇಕಲ್, ಹಿರಿಯರಾದ ನಂದಾಪುರ ಶ್ರೀನಿವಾಸ, ಪ್ರಾಣೇಶ ಮುತಾಲಿಕ್, ಡಾ!ಆನಂದ್ ತೀರ್ಥ ಪಡ್ನಿಸ್ ,ಟಿ ರಮೇಶ್ ,ಕೋಲಾರ ವೆಂಕಟೇಶ್, ಜಿಲ್ಲಾ ಕಾರ್ಯದರ್ಶಿಗಳಾದ ಅನಿಲ್ ಕುಮಾರ್ ಹಾಗೂ ವಿಷ್ಣು ತೀರ್ಥ ಸಿರವಾರ, ರಮಾಕಾಂತ್ ರಾವ್ ಗುಂಜಳ್ಳಿ, ಕಿಶನ್ ರಾವ್ ಎಲ್ಕೆ ದೊಡ್ಡಿ, ಸುಬ್ಬರಾವ್ ಮಟಮಾರಿ, ಶ್ರೀನಿವಾಸ ದೇಸಾಯಿ, ವಿನೋದ ಕಕ್ಕೇರಿ ಸೇರದಂತೆ ಸಮಾಜದ ಹಲವಾರು ಹಿರಿಯರು, ಯುವಕರು ಭಾಗವಹಿಸಿ ಯಶಸ್ವಿಗೊಳಿಸಿದರು

ಪ್ರಧಾನಿ ಮೋದಿ ಬಗ್ಗೆ ಖರ್ಗೆ ಅವರ ವಿವಾದಾತ್ಮಕ ಹೇಳಿಕೆ ಖಂಡಿಸಿ ಬಿಜೆಪಿ ಪ್ರತಿಭಟನೆ

ರಾಯಚೂರು, ಏ.21: ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ನೀಡಿದ ವಿವಾದಾತ್ಮಕ ಹೇಳಿಕೆಯನ್ನು ಖಂಡಿಸಿ ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿ ಎದುರು ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಗರ ಶಾಸಕ ಡಾ. ಶಿವರಾಜ್ ಪಾಟೀಲ್ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಕಾರ್ಯಕರ್ತರು ಖರ್ಗೆ ಅವರ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಇದೇ ವೇಳೆ ಟೈರ್‌ಗೆ ಬೆಂಕಿ ಹಚ್ಚಿ, ಖರ್ಗೆ ಅವರ ಪ್ರತಿಕೃತಿಯನ್ನು ದಹಿಸಿ ತಮ್ಮ ವಿರೋಧವನ್ನು ತೀವ್ರವಾಗಿ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಶಾಸಕ ಡಾ. ಶಿವರಾಜ್ ಪಾಟೀಲ್, ತಮಿಳುನಾಡಿನಲ್ಲಿ ನಡೆದ ಚುನಾವಣಾ ಪ್ರಚಾರದ ಕೊನೆಯ ದಿನ ಚೆನ್ನೈನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಖರ್ಗೆ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ''ಭಯೋತ್ಪಾದಕ'' ಎಂದು ಉಲ್ಲೇಖಿಸಿರುವುದಾಗಿ ಆರೋಪಿಸಿದರು. ಇಂತಹ ಹೇಳಿಕೆಗಳು ದೇಶದ ರಾಜಕೀಯ ಸಂಸ್ಕೃತಿಗೆ ಧಕ್ಕೆಯುಂಟುಮಾಡುವಂತವು ಎಂದು ಹೇಳಿದರು.

ಮಹಿಳಾ ಮೀಸಲಾತಿ ಮಸೂದೆ ಮತ್ತು ಕ್ಷೇತ್ರ ಪುನರ್‌ವಿಂಗಡಣೆ ವಿಚಾರದಲ್ಲಿ ವಿರೋಧ ಪಕ್ಷಗಳ ಒಗ್ಗಟ್ಟನ್ನು ಪ್ರಶ್ನಿಸಿದ ಖರ್ಗೆ, ಬಿಜೆಪಿ ಬೆಂಬಲಿಸಿದ್ದಕ್ಕಾಗಿ ಎಐಎಡಿಎಂಕೆ



ಪಕ್ಷವನ್ನು ಟೀಕಿಸಿ, ಪ್ರಧಾನಿ ಮೋದಿಯವರ ವಿರುದ್ಧ ಅಸಂಬದ್ಧ ಆರೋಪಗಳನ್ನು ಮಾಡಿದ್ದಾರೆ ಎಂದು ಆರೋಪಿಸಿದರು.

''ಪ್ರಧಾನಿ ಮೋದಿ ದೇಶದ ಜನರ ಅಭಿವೃದ್ಧಿಗಾಗಿ ಶ್ರಮಿಸುತ್ತಿದ್ದಾರೆ. ಅವರ ವಿರುದ್ಧ ಇಂತಹ ಅವಹೇಳನಕಾರಿ ಪದಗಳನ್ನು ಬಳಸುವುದು ಕಾಂಗ್ರೆಸ್ ಪಕ್ಷದ ನಿಜಸ್ವಭಾವವನ್ನು ತೋರಿಸುತ್ತದೆ,'' ಎಂದು ಶಾಸಕರು ಕಿಡಿಕಾರಿದರು.

ಖರ್ಗೆ ಅವರು ಇಡಿ, ಐಟಿ, ಸಿಬಿಐ ಸಂಸ್ಥೆಗಳ ದುರುಪಯೋಗ ಕುರಿತು ಮಾಡಿದ ಆರೋಪಗಳನ್ನೂ ತಳ್ಳಿ ಹಾಕಿದ ಅವರು, ಇದು ರಾಜಕೀಯ ಲಾಭಕ್ಕಾಗಿ


4 ನೇ ಪುಟಕ್ಕೆ...

''ಹೆದ್ದಾರಿ 167: ಅಭಿವೃದ್ಧಿಯ ಹೆಸರಿನಲ್ಲಿ ಸಾವಿನ ಸರಪಳಿ

18 ವರ್ಷದ ಯುವಕ ಸೇರಿ 800ಕ್ಕೂ ಹೆಚ್ಚು ಜೀವಗಳ ಬೆಲೆಗೂ ಜಾಗೃತಿಯಾಗದ ವ್ಯವಸ್ಥೆ''

ರಾಯಚೂರು, ಏ.23-

ರಾಷ್ಟ್ರೀಯ ಹೆದ್ದಾರಿ 167ರ ದುಸ್ಥಿತಿ ದಿನೇದಿನೇ ಗಂಭೀರ ಸ್ವರೂಪ ಪಡೆದುಕೊಳ್ಳುತ್ತಿದ್ದು, ಅಭಿವೃದ್ಧಿಯ ಸಂಕೇತವಾಗಬೇಕಾದ ಈ ರಸ್ತೆ ಇದೀಗ ಅಪಘಾತಗಳ ಸಾವಿನ ಬಲೆಯಾಗಿ ಪರಿಣಮಿಸಿದೆ. ನವೋದಯ ವೈದ್ಯಕೀಯ ಶಿಕ್ಷಣ ಸಂಸ್ಥೆ ವೃತ್ತದಿಂದ ಹೈದರಾಬಾದ್ ಬೈಪಾಸ್ ವರೆಗೆ ಹರಡುವ ಈ ಹೆದ್ದಾರಿಯಲ್ಲಿ ಇದುವರೆಗೆ ಸುಮಾರು 800ಕ್ಕೂ ಹೆಚ್ಚು ಮಂದಿ ಜೀವ ಕಳೆದುಕೊಂಡಿರುವುದು ಆತಂಕಕಾರಿ ಸಂಗತಿ ಯಾಗಿದ್ದು, ಇತ್ತೀಚೆಗೆ ನಡೆದ ಅಪಘಾತದಲ್ಲಿ 18 ವರ್ಷದ ಯುವಕನೊಬ್ಬ ಸ್ಥಳದಲ್ಲೇ ಮೃತಪಟ್ಟ ಘಟನೆ ಜನರ ಆಕ್ರೋಶವನ್ನು ಮತ್ತಷ್ಟು ಹೆಚ್ಚಿಸಿದೆ.



ಸ್ಥಳೀಯರು ಹಾಗೂ ವಾಹನ ಸವಾರರ ಪ್ರಕಾರ, ಹೆದ್ದಾರಿಯ ಕಿರಿದಾದ ವಿನ್ಯಾಸ, ಸಮರ್ಪಕ ದೀಪಾಲಂಕಾರದ ಕೊರತೆ, ಎಚ್ಚರಿಕಾ ಸೂಚನಾ ಫಲಕಗಳ ಅಭಾವ ಹಾಗೂ ನಿಯಂತ್ರಣರಹಿತ ವೇಗದ ಸಂಚಾರವೇ ಅಪಘಾತಗಳ ಪ್ರಮುಖ ಕಾರಣಗಳಾಗಿವೆ. ವಿಶೇಷವಾಗಿ ರಾತ್ರಿ ವೇಳೆಯಲ್ಲಿ ಬೆಳಕಿನ ಕೊರತೆಯಿಂದ ದೃಶ್ಯತೆ ಕುಂದಿ ಅಪಘಾತಗಳ ಪ್ರಮಾಣ ಹೆಚ್ಚುತ್ತಿದೆ.

ಪೊಲೀಸರ ಪ್ರಾಥಮಿಕ ಮಾಹಿತಿಯಂತೆ, ಹೆದ್ದಾರಿಯ ಹಲವು ಭಾಗಗಳಲ್ಲಿ ಅಪಾಯ ಕಾರಿ ತಿರುವುಗಳು ಮತ್ತು ವಿಭಜನೆ ಇಲ್ಲದ ರಸ್ತೆಯ ಕಾರಣದಿಂದ ಮುಖಾಮುಖಿ ಡಿಕ್ಕಿಗಳು ಸಾಮಾನ್ಯ ವಾಗಿವೆ. ಈ ಹಿನ್ನೆಲೆಯಲ್ಲಿ ಹಲವು ಸ್ಥಳಗಳು ಬ್ಲ್ಯಾಕ್

4 ನೇ ಪುಟಕ್ಕೆ...

ಪೂರ್ವಭಾವಿ ಸಭೆಯಲ್ಲಿ ನಿರ್ಧಾರ

ಮಹನೀಯರ ಜಯಂತಿ ಅರ್ಥಪೂರ್ಣ ಆಚರಣೆ: ಎಸಿ ರಾಜೇಶ್ ಹೆಚ್.ಡಿ



ಬಳ್ಳಾರಿ,ಏ.23-

ಜಿಲ್ಲಾ ಕೇಂದ್ರದಲ್ಲಿ ಬರುವ ಮೇ 01 ರಂದು ಭಗವಾನ್ ಬುದ್ಧ ಜಯಂತಿ ಹಾಗೂ ಮೇ 10 ರಂದು ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಆಚರಿಸೋಣ ಎಂದು ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ ಅವರು ಹೇಳಿದರು.

ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡೀಯೋ ಸಭಾಂಗಣದಲ್ಲಿ ವಿವಿಧ ಮಹನೀಯರ ಜಯಂತಿ ಆಚರಣೆ ಕುರಿತು ಬುಧವಾರ ಕರೆದಿದ್ದ ಪೂರ್ವಭಾವಿ ಸಭೆಯಲ್ಲಿ ಸಮಾಜದ ಮುಖಂಡರ ಸಮ್ಮುಖದಲ್ಲಿ ನಿರ್ಧರಿಸಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಮಹನೀಯರ ಜಯಂತಿ ಕಾರ್ಯಕ್ರಮಗಳನ್ನು ಶಿಷ್ಠಾಚಾರದನ್ವಯ ಆಚರಿಸಬೇಕಾಗಿದ್ದು, ಇದಕ್ಕೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ತಿಳಿಸಿದರು.

ಮೇ 01 ರಂದು ಭಗವಾನ್ ಬುದ್ಧ ಜಯಂತಿ ಅಂಗವಾಗಿ ಅಂದು ಸಂಜೆ 05 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಭವ್ಯ ಮೆರವಣಿಗೆ ಹಮ್ಮಿಕೊಳ್ಳಲಾಗುವುದು. ಮೆರವಣಿಗೆಯು ಗಡಿಗಿ ಚೆನ್ನಪ್ಪ ವೃತ್ತದ ಮೂಲಕ ಸಂಗ ವೃತ್ತದ ಮಾರ್ಗವಾಗಿ ಸಾಂಸ್ಕೃತಿಕ ಹೊಂಗಿರಣ ಸಭಾಂಗಣದವರೆಗೆ ನಡೆಯಲಿದೆ. ಬಳಿಕ 06 ಗಂಟೆಗೆ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದರು.

ಈ ಬಾರಿ ಮೇ 01 ರಂದು ಅಂತರರಾಷ್ಟ್ರಿಯ ಕಾರ್ಮಿಕ ದಿನವೂ ಆಗಿರುವುದರಿಂದ, ರಜೆ ಇರುತ್ತದೆ. ಹಾಗಾಗಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದರು. ಅದೇರೀತಿಯಾಗಿ ಮೇ 10 ರಂದು ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮವನ್ನು ನಗರದ ಬಸವ ಭವನದಲ್ಲಿ ಅಚ್ಚುಕಟ್ಟಾಗಿ ಆಯೋಜಿಸಲು ನಿರ್ಧರಿಸಲಾಗಿದ್ದು, ಅಂದು ಸಂಜೆ 05 ಗಂಟೆಗೆ ನಗರದ ಕನಕ ದುರ್ಗಮ್ಮ ದೇವಸ್ಥಾನದ ಆವರಣದಿಂದ ಮೆರವಣಿಗೆ ಹಮ್ಮಿಕೊಳ್ಳಲಾಗುವುದು. ಬಳಿಕ ಸಂಜೆ 06.30 ಗಂಟೆಗೆ ವೇದಿಕೆ ಕಾರ್ಯಕ್ರಮ ಜರುಗಲಿದೆ ಎಂದರು.

ಜಯತಿ ಮೆರವಣಿಗೆಗಳಲ್ಲಿ ವಿವಿಧ ಸಾಂಸ್ಕೃತಿಕ ಕಲಾ ತಂಡಗಳನ್ನು ನಿಯೋಜಿಸಲಾಗುವುದು. ಮೆರವಣಿಗೆಯ ಹಾದಿಯಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಮತ್ತು ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡುವುದು. ವೇದಿಕೆ ಕಾರ್ಯಕ್ರಮದಲ್ಲಿ ಸ್ವಚ್ಛತೆ ಸೇರಿದಂತೆ ಹಲವು ಕಾರ್ಯಗಳನ್ನು ನಿರ್ವಹಿಸುವಂತೆ ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಬ್ಯಾನರ್ ಅಳವಡಿಕೆ ಕುರಿತಂತೆ ಮಹಾನಗರ ಪಾಲಿಕೆ ವತಿಯಿಂದ ಕಡ್ಡಾಯ ಅನುಮತಿ ಪಡೆಯಬೇಕು. ಮಹನೀಯರ ಶಾಂತಿ ತತ್ವಗಳ ಕುರಿತು ನುರಿತರಿಂದ ವಿಶೇಷ ಉಪನ್ಯಾಸ ಏರ್ಪಡಿಸಲಾಗುವುದು. ಶಿಷ್ಠಾಚಾರದನ್ವಯ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ ಗಣ್ಯರನ್ನು ಆಹ್ವಾನಿಸಲಾಗುವುದು ಎಂದರು.

ಬುದ್ಧ ಜಯಂತಿಯದು ಸರ್ಕಾರಿ ವಸತಿ ಶಾಲಾ-ಕಾಲೇಜುಗಳಲ್ಲಿ ಧ್ಯಾನ ಶಿಬಿರ ಆಯೋಜಿಸಬೇಕು ಎಂದು ಮುಖಂಡರೊಬ್ಬರು ಸಭೆಯಲ್ಲಿ ಪ್ರಸ್ತಾಪಿಸಿದರು. ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜನೆ ಕುರಿತಂತೆ ತಮ್ಮ ಸಲಹೆ-ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಮಹಾನಗರ ಪಾಲಿಕೆ, ತೋಟಗಾರಿಕೆ, ಪೊಲೀಸ್ ಇಲಾಖೆ ಅಧಿಕಾರಿಗಳು ಮತ್ತು ಸಮಾಜದ ಮುಖಂಡರು ಉಪಸ್ಥಿತರಿದ್ದರು.

ಬಳ್ಳಾರಿ: ಸರ್ಕಾರಿ ಜಮೀನು ಒತ್ತುವರಿ ವಿರುದ್ಧ ಜಿಲ್ಲಾಡಳಿತ ಸಮರ

ಅಂದ್ರಾಳ್ ಬೈಪಾಸ್ ಬಳಿ ತೆರವು ಕಾರ್ಯಾಚರಣೆ



ಬಳ್ಳಾರಿ,ಏ.23-

ಜಿಲ್ಲಾಡಳಿತವು ಸರ್ಕಾರಿ ಜಮೀನು ಒತ್ತುವರಿ ಮಾಡಿಕೊಂಡವರ ವಿರುದ್ಧ ಕಠಿಣ ಕ್ರಮಕ್ಕೆ ಮುಂದಾಗಿದ್ದು, ಬುಧವಾರ ಅಂದ್ರಾಳ್ ಬೈಪಾಸ್ ರಸ್ತೆಯ ಸಮೀಪ ಕಾರ್ಯಾಚರಣೆ ನಡೆಸಿತು.

ಅಂದ್ರಾಳ್ ಗ್ರಾಮದ ಸರ್ವೆ ನಂಬರ್ ಒಂದರಲ್ಲಿ ಸುಮಾರು 3 ಎಕರೆಗೂ ಅಧಿಕ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಳ್ಳಲಾಗಿತ್ತು. ಇಲ್ಲಿ ಅಕ್ರಮವಾಗಿ ನಿರ್ಮಿಸಲಾಗಿದ್ದ ಸಿಮೆಂಟ್ ಕಟ್ಟಡಗಳು ಮತ್ತು ಇತರ ನಿರ್ಮಾಣಗಳನ್ನು ಜಿಲ್ಲಾಡಳಿತವು ಜೆಸಿಬಿ ಯಂತ್ರಗಳ ಸಹಾಯದಿಂದ ತೆರವುಗೊಳಿಸಿದೆ.

ಈ ವೇಳೆ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಎನ್. ಅವರು ಮಾತನಾಡಿ, ಜಿಲ್ಲಾಡಳಿತದ ಈ ದಿಟ್ಟ ಕ್ರಮವು ಸರ್ಕಾರಿ ಆಸ್ತಿಯನ್ನು ರಕ್ಷಿಸುವ ನಿಟ್ಟಿನಲ್ಲಿ ಪ್ರಮುಖ ಹೆಜ್ಜೆ ಇಟ್ಟಿದ್ದು, ಈ ಒತ್ತುವರಿಯ ಹಿಂದೆ ಯಾರೇ ಇದ್ದರೂ ಮತ್ತು ಯಾರು ಪ್ರಚೋದನೆ ನೀಡುತ್ತಿದ್ದರೂ ಅವರ ಮೇಲೆ ಸೂಕ್ತ ಕ್ರಮ ಜರುಗಿಸಲಾಗುವುದು. ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸಿದರೆ ಅಥವಾ ಸಾರ್ವಜನಿಕರಿಗೆ ತೊಂದರೆ ನೀಡಿದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು

ಈ ಸಂದರ್ಭದಲ್ಲಿ ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಡಿಡಿಎಲ್‌ಆರ್ ಪ್ರಮೋದ್ ಸೇರಿದಂತೆ ಬಳ್ಳಾರಿ ತಾಲ್ಲೂಕು ತಹಸೀಲ್ದಾರ ಕಚೇರಿಯ ಅಧಿಕಾರಿ-ಸಿಬ್ಬಂದಿ ಹಾಗೂ ಮತ್ತೀತರರು ಇದ್ದರು.

ಐಟಿಐನಲ್ಲಿ ಶಿಶಿಕ್ಷಾ ಮೇಳ: 180ರಲ್ಲಿ 150 ಮಂದಿಗೆ ಉದ್ಯೋಗ ಅವಕಾಶ



ಆಳಂದ,ಏ.23-

ಪಟ್ಟಣದ ಹಳೆಯ ತಹಸೀಲ್ದಾರ ಕಚೇರಿ ಆವರಣದಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಐಟಿಐ)ಯಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾದ ಪ್ರಧಾನ ಮಂತ್ರಿ ರಾಷ್ಟ್ರೀಯ ಶಿಶಿಕ್ಷಾ (ಅಪ್ರೆಂಟಿಸ್) ಮೇಳ ಗ್ರಾಮೀಣ ಯುವಜನತೆಗೆ ಹೊಸ ದಿಕ್ಕು ತೋರಿಸಿದ ಮಹತ್ವದ ಕಾರ್ಯಕ್ರಮವಾಗಿ ಗುರುತಿಸಿಕೊಂಡಿತು.

ಮೇಳವನ್ನು ಪುರಸಭೆ ಮುಖ್ಯಾಧಿಕಾರಿ ಸಂಗಮೇಶ ಪನಶೆಟ್ಟಿ ಉದ್ಘಾಟಿಸಿ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಕೌಶಲ್ಯಾಧಾರಿತ ಶಿಕ್ಷಣದ ಅಗತ್ಯತೆಯನ್ನು ಒತ್ತಿಹೇಳಿದರು. ''ಯುವಕರು ಕೇವಲ ಪದವಿಗಳ ಹಿಂದೆ ಓಡದೆ ಕೈಗಾರಿಕಾ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು. ಇಂತಹ ಮೇಳಗಳು ಗ್ರಾಮೀಣ ವಿದ್ಯಾರ್ಥಿಗಳಿಗೆ ನೇರವಾಗಿ ಉದ್ಯೋಗದ ಅವಕಾಶಗಳನ್ನು ನೀಡುತ್ತವೆ'' ಎಂದು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ವಿ. ರಂಗಸ್ವಾಮಿ ಶೆಟ್ಟಿ ಮಾತನಾಡಿ, ಶಿಶಿಕ್ಷಾ ಯೋಜನೆ ಯುವಜನರಿಗೆ ತರಬೇತಿಯೊಂದಿಗೆ ಉದ್ಯೋಗ ಅನುಭವವನ್ನು ನೀಡುವ ಪ್ರಮುಖ ಯೋಜನೆ ಎಂದು ವಿವರಿಸಿದರು. ಗಾಣಗಾಪೂರ ಐಟಿಐ ಪ್ರಾಚಾರ್ಯ ಶರಣಬಸಪ್ಪ ಸಡ್ಡು ಹಾಗೂ ಚೌಡಾಪೂರ ಐಟಿಐ ಪ್ರಾಚಾರ್ಯ ಸುಭಾಷ ಯವಳೆ ಕೂಡ ವಿದ್ಯಾರ್ಥಿಗಳಿಗೆ ತಾಂತ್ರಿಕ ಶಿಕ್ಷಣದ ಮಹತ್ವವನ್ನು ವಿವರಿಸಿ, ಅದನ್ನು ಸಮರ್ಪಕವಾಗಿ ಬಳಸಿಕೊಳ್ಳುವಂತೆ ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸ್ಥಳೀಯ ಐಟಿಐ ಪ್ರಾಚಾರ್ಯ ಸಿದ್ಧಪ್ಪ ಜಮಾದಾರ ಮೇಳದ ಉದ್ದೇಶವನ್ನು ವಿವರಿಸಿ, ಗ್ರಾಮೀಣ ವಿದ್ಯಾರ್ಥಿಗಳಿಗೆ ದೊಡ್ಡ ಕಂಪನಿಗಳೊಂದಿಗೆ ನೇರ ಸಂಪರ್ಕ ಸಾಧಿಸುವ ಅವಕಾಶ ಕಲ್ಪಿಸಿರುವುದು ವಿಶೇಷ ಎಂದರು.

ಈ ಮೇಳದಲ್ಲಿ ಟೊಯೋಟಾ ಕಿರ್ಲೋಸ್ಕರ್, ಟಾಟಾ ಪವಾರ ಸೋಲಾರ್ ಬೆಂಗಳೂರು, ಮಹೀಂದ್ರ ತೋಶಿಬಾ ಸೇರಿದಂತೆ ಸುಮಾರು 15 ಪ್ರಮುಖ ಕಂಪನಿಗಳು ಭಾಗವಹಿಸಿ, ವಿದ್ಯಾರ್ಥಿಗಳ ಸಂದರ್ಶನ ನಡೆಸಿದವು.

ಒಟ್ಟು 180ಕ್ಕೂ ಹೆಚ್ಚು ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ಅದರಲ್ಲಿ ಸುಮಾರು 150 ಮಂದಿಗೆ ಸ್ಥಳದಲ್ಲೇ ಆಯ್ಕೆ ಮಾಡಲಾಗಿರುವುದು ಮೇಳದ ಯಶಸ್ಸಿಗೆ ಸಾಕ್ಷಿಯಾಯಿತು.

ಕಿರಿಯ ತಾಂತ್ರಿಕ ಅಧಿಕಾರಿ ಲಾಡಪ್ಪ ಸಕ್ಕರಗಿ, ದೈಹಿಕ ಶಿಕ್ಷಣಾಧಿಕಾರಿ ಅರವಿಂದ ಭಾಸಗಿ, ಪುಸ್ತಕ್ ನೋಡಲ್ ಅಧಿಕಾರಿ ಶ್ರೀಮಂತ ಪಾಟೀಲ, ಯಶ್ವಂತರಾಯ ಮಡ್ಡಿತೋಟ, ಪಿರಪ್ಪ ಪೂಜಾರಿ, ರಮೇಶ್ ಲಿಂಬಿತೋಟ, ಸಂತೋಷ ವಾಲಿ, ಅಣ್ಣಪ್ಪ ಅಣಕಲ್ ಸೇರಿದಂತೆ ಅನೇಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಲಾಡಪ್ಪ ಮುಲಗೆ ಸಕ್ಕರಗಿ ಸ್ವಾಗತಿಸಿ, ಸುಧಾಕರ ಖಂಡೇಕರ್ ವಂದಿಸಿದರು.

ಮಹಾತ್ಮರ ತತ್ವ, ಸಂದೇಶ ಸಾರ್ವಕಾಲಿಕ

ಕಂಪ್ಲಿ,ಏ.23-

ತಾಲ್ಲೂಕಿನ ಎಮ್ಮಿಗನೂರು ಗ್ರಾಮದ ವೀರಶೈವ ಕ್ಷೇಮಾಭಿವೃದ್ಧಿ ಸಂಘ ದಿಂದ ಜಗಜ್ಯೋತಿ ಬಸವೇಶ್ವರ ಮತ್ತು ಏಕೋರಾಮರಾಧ್ಯರ ಜಯಂತ್ಯುತ್ಸವ ಅಂಗವಾಗಿ ಗ್ರಾಮದಲ್ಲಿ ಅವರ ಭಾವಚಿತ್ರ ಮೆರವಣಿಗೆ ಸೋಮವಾರ ಸಂಭ್ರಮದಿಂದ ಜರುಗಿತು.

ಸ್ಥಳೀಯ ಹಂಪಿ ಸಾವಿರ ದೇವರ ಮಠದ ವಾಮದೇವ ಮಹಾಂತ ಶಿವಾ ಚಾರ್ಯರು ಮೆರವಣಿಗೆಗೆ ಚಾಲನೆ ನೀಡಿ, ಜಗಜ್ಯೋತಿ ಬಸವೇಶ್ವರ ಮತ್ತು ಏಕೋರಾಮರಾಧ್ಯರು ಸೇರಿದಂತೆ ಮಹನೀ ಯರ ತತ್ವ, ಸಂದೇಶಗಳು ಸಾರ್ವಕಾಲಿಕವಾಗಿದ್ದು, ಅವುಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಂಡಾಗ ಉತ್ತಮ ಸಮಾಜ ನಿರ್ಮಾಣ ಸಾಧ್ಯ ಎಂದು ಅಭಿಪ್ರಾಯ ಪಟ್ಟರು. ಎಚ್. ವೀರಾಪುರ ಗ್ರಾಮದ ಜಡೇಶ ಶರಣರು ಆಶೀರ್ವಚನ ನೀಡಿ ದರು. ಪ್ರಮುಖರಾದ ಕವಿತಾಳ ಪ್ರವೀಣ್, ಹಂಪಿ ಜಡೇಮೂರ್ತಿ, ಬಜಾರ ಬಸವರಾಜ, ಸಜ್ಜನರ ಬಸವರಾಜ, ಶರಣಗೌಡ, ಕೆ.ಎಂ. ಘನಮಠೇಶ, ಬಾಪೂರ ಶ್ರೀಶೈಲ ಸೇರಿದಂತೆ ಇತರರು ಭಾಗವಹಿಸಿದ್ದರು.

ಧಾರ್ಮಿಕ ಕೇಂದ್ರ ಪುನರುಜ್ಜೀವನಕ್ಕೆ ಒತ್ತು 'ಕ್ಷೇತ್ರದಲ್ಲಿ ಸಾಮಾಜಿಕ ಹಾಗೂ ಶೈಕ್ಷಣಿಕ ಸುಧಾರಣೆಯ ಜತೆಗೆ ಧಾರ್ಮಿಕ ಕೇಂದ್ರಗಳ ಪುನರುಜ್ಜೀವನಕ್ಕೂ ಒತ್ತು ನೀಡಲಾಗುತ್ತಿದೆ ಎಂದು ಶಾಸಕ ಡಾ.ಎನ್.ಟಿ.ಶ್ರೀನಿವಾಸ್ ಹೇಳಿದರು.

ಪಟ್ಟಣದ ಗ್ರಾಮ ದೇವತೆ ಶ್ರೀ ಊರಮ್ಮ ದೇವಿಗೆ ಭಕ್ತರ ದೇಣಿಗೆಯಿಂದ ಮಾಡಿಸಲಾದ ಸುಮಾರು ₹ 25 ಲಕ್ಷ ಮೌಲ್ಯದ ನೂತನ ಬಂಗಾರದ ಮುಖ ಹಾಗೂ ಕಿರೀಟವನ್ನು ಮಂಗಳವಾರ ಭಕ್ತಿಭಾವದಿಂದ ಅರ್ಪಿಸಿದ ಬಳಿಕ ಅವರು ಮಾತನಾಡಿದರು.



ಕಳೆದ ವರ್ಷ ಸುಮಾರು ₹ 3 ಕೋಟಿ ಅಧಿಕ ವೆಚ್ಚದಲ್ಲಿ ಊರಮ್ಮ ದೇವಿಯ ಭವ್ಯ ದೇವಸ್ಥಾನ ನಿರ್ಮಿಸಲಾಗಿತ್ತು. ಈಗ ಭಕ್ತರು ನೀಡಿದ ದೇಣಿಗೆಯಲ್ಲಿ ದೇವಿಗೆ ಸ್ವರ್ಣ ಮುಖ ಮತ್ತು ಕಿರೀಟ ಮಾಡಿಸುವ ಮೂಲಕ ಧಾರ್ಮಿಕ ಮಹತ್ವವನ್ನು ಮತ್ತಷ್ಟು ಹೆಚ್ಚಿಸಲಾಗಿದೆ. ದೇವಸ್ಥಾನ ನಿರ್ಮಾಣದಲ್ಲಿ ಆಡಳಿತ ಮಂಡಳಿ ಹಾಗೂ ಭಕ್ತರ ಕಾರ್ಯ ಶ್ಲಾಘನೀಯ' ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ದೇವಸ್ಥಾನ ಆಡಳಿತ ಮಂಡಳಿ ಅಧ್ಯಕ್ಷ ಕೆ.ಎಚ್.ವೀರನಗೌಡ, ಹಿ.ಮ.ಚಿದಾನಂದ ಸ್ವಾಮಿ, ಮುಖಂಡರಾದ ಉದಯ ಜನ್ನು, ಎಸ್.ಸುರೇಶ್, ಸಿ.ಬಿ.ಜಯರಾಂ ನಾಯಕ, ಟಿ.ಜಿ.ಮಲ್ಲಿಕಾರ್ಜುನ ಗೌಡ, ಶೆಟ್ರು ಬಸವರಾಜ, ಬಣಕಾರ ಮಂಜುನಾಥ, ಥಾಣಿ ರಾಘವೇಂದ್ರ, ಥಾಣಿ ಚೌಡಮ್ಮ, ಶೆಟ್ರು ಬಸವರಾಜ, ಅರ್ಚಕ ನಾಗರಾಜ, ಈರಣ್ಣ, ಕೆ.ಈಶಪ್ಪ, ಬಿ.ಕೆ.ರಾಘವೇಂದ್ರ, ಕಡ್ಡಿ ಮಂಜುನಾಥ ಹಾಗೂ ಅಪಾರ ಸಂಖ್ಯೆಯ ಭಕ್ತರು ಉಪಸ್ಥಿತರಿದ್ದರು.

ಹಗರಿಬೊಮ್ಮನಹಳ್ಳಿ: ಪಟ್ಟಣದ ಅಯ್ಯಪ್ಪಸ್ವಾಮಿ ದೇವಸ್ಥಾನದಲ್ಲಿ ಈಶ್ವರ ಮತ್ತು ಅಯ್ಯಪ್ಪಸ್ವಾಮಿ ಚಾರಿ ಟಬಲ್ ಟ್ರಸ್ಟ್‌ನಿಂದ ಪ್ರತಿಷ್ಠಾ ದಿನ ಮಹೋತ್ಸವ ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ಬೆಳಗಿನ ಜಾವದಿಂದಲೇ ಧಾರ್ಮಿಕ ಕಾರ್ಯಕ್ರಮಗಳು ಆರಂಭಗೊಂಡವು. ಗಣಪತಿ ಹೋಮ, ಕಳಸ ಪೂಜೆ ಬಳಿಕ ಅಯ್ಯಪ್ಪ ಸ್ವಾಮಿ ವಿಶೇಷ ಪೂಜೆಗಳು ನಡೆದವು, ಅಷ್ಟಾಭಿಷೇಕ, ಕಳಸ ಅಭಿಷೇಕ, ಪಷ್ಪಾಭಿಷೇಕ ಭಕ್ತರ ಸಮ್ಮುಖದಲ್ಲಿ ಜರುಗಿದವು.

ಶಂಕರನ್ ನಂಬೂದರಿ ಸ್ವಾಮೀಜಿ ನೇತೃತ್ವದಲ್ಲಿ ಎಲ್ಲ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಮಹಾ ಮಂಗಳಾರತಿ ಬಳಿಕ ಪ್ರಸಾದ ವಿತರಣೆ ನಡೆಯಿತು. ಇದೇ ಸಂದರ್ಭದಲ್ಲಿ ಅಡುಗೆ ಕೊಠಡಿ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲಾಯಿತು, ಸಂಜೆ ದೀಪಾರಾಧನೆ, ಹರಿವರಾಸನಂ ಭಕ್ತರ ಮನಸ್ಸಿಗೆ ಆಧ್ಯಾತ್ಮಿಕ ಉಲ್ಲಾಸ ತರಿಸಿತು.

ಹರಪನಹಳ್ಳಿ: ಹಬ್ಬಗಳು ಪರಸ್ಪರ ಸಂಬಂಧಗಳನ್ನು ಬೆಸೆಯುವ ಕೊಂಡಿಗಳಾಗಬೇಕೇ ಹೊರತು, ದುಂದುವೆಚ್ಚದ ಆಗರವಾಗಬಾರದು ಎಂದು ಮಾಜಿ ಸಚಿವ ಪಿ.ಟಿ. ಪರಮೇಶ್ವರನಾಯ್ಕ ಅಭಿಪ್ರಾಯಪಟ್ಟರು.

ತಾಲ್ಲೂಕಿನ ಸಿಂಗ್ರಿಹಳ್ಳಿ ದೊಡ್ಡ ತಾಂಡಾದಲ್ಲಿ 14 ವರ್ಷಗಳ ನಂತರ ಆಯೋಜಿಸಲಾಗಿದ್ದ ಸಂತ ಸೇವಾ ಲಾಲ್ ಹಾಗೂ ಮರಿಯಮ್ಮ ದೇವಿ ಜಾತ್ರೋತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಗ್ರಾಮಸ್ಥರು ಕುಡಿತದಂತಹ ದುಶ್ಚಟಗಳಿಂದ ದೂರವಿರಬೇಕು. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಮೂಲಕ ಪ್ರಜ್ಞಾವಂತ ಸಮಾಜ ನಿರ್ಮಾಣದಲ್ಲಿ ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಜಾತ್ರೆಯ ಅಂಗವಾಗಿ ವಿವಿಧ ವಾದ್ಯಮೇಳಗಳೊಂದಿಗೆ ಶ್ರೀ ದುರ್ಗಮ್ಮ ದೇವಿ, ಶ್ರೀ ಸೇವಾಲಾಲ್ ಹಾಗೂ ಶ್ರೀ ಮರಿಯಮ್ಮ ದೇವಿಯ ಪಲ್ಲಕ್ಕಿ ಮಹೋತ್ಸವ ವಿಜೃಂಭಣೆಯಿಂದ ಜರುಗಿತು. ಬಂಜಾರ ಸಮುದಾಯದ ಸಾಂಪ್ರದಾಯಿಕ ವಾಜ (ಭಜನೆ) ಆರಾಧನೆ ಗಮನಸೆಳೆಯಿತು.

ಸಮುದಾಯದ ಮಹಿಳೆಯರು ಮತ್ತು ಯುವತಿಯರು ಸಾಂಪ್ರದಾಯಿಕ ಉಡುಗೆ ತೊಟ್ಟು, ಜಾನಪದ ಹಾಡು ಗಳಿಗೆ ಹೆಜ್ಜೆ ಹಾಕಿದರು. ದಾರಿಯುದ್ದಕ್ಕೂ ಭಕ್ತರು ಪಲ್ಲಕ್ಕಿಯ ಕೆಳಗೆ ಕುಳಿತು ಹರಕೆ ತೀರಿಸಿದರು. ಚಿತ್ರದುರ್ಗ ಬಂಜಾರ ಗುರುಪೀಠದ ಸರ್ದಾರ್ ಸೇವಾಲಾಲ್ ಸ್ವಾಮೀಜಿ, ಶಿವಪ್ರಕಾಶ್ ಮಹಾರಾಜ್, ತಾಂಡಾದ ನಾಯಕರು, ಡಾವೋ, ಕಾರಭಾರಿಗಳು ಪಾಲ್ಗೊಂಡಿದ್ದರು.

24 ರಂದು ಡಾ.ರಾಜಕುಮಾರ ಜನ್ಮ ದಿನಾಚರಣೆಗೆ ನಿರ್ಧಾರ



ಕಲಬುರಗಿ,ಏ.23-

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಜಿಲ್ಲಾಡಳಿತದ ವತಿಯಿಂದ ಏಪ್ರಿಲ್ 24ರಂದು ವರನಟ ಡಾ. ರಾಜಕುಮಾರ ಅವರ 97ನೇ ಜನ್ಮ ದಿನಾಚರಣೆಯನ್ನು ಜಿಲ್ಲಾ ಮಟ್ಟದಲ್ಲಿ ಅರ್ಥಪೂರ್ಣವಾಗಿ ಆಚರಿಸಲು ತೀರ್ಮಾನಿಸಲಾಗಿದೆ.

ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರ ಅಧ್ಯಕ್ಷತೆಯಲ್ಲಿ ಮಂಗಳವಾರ ನಡೆದ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಯಿತು. ಅಂದು ಬೆಳಿಗ್ಗೆ 10 ಗಂಟೆಗೆ ನಗರದ ಕನ್ನಡ ಭವನದ ಸುವರ್ಣ ಭವನದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದ್ದು, ಡಾ. ರಾಜ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದರ ಜೊತೆಗೆ ಅವರ ಚಿತ್ರಗಳ ಗೀತಗಾಯನ ಕಾರ್ಯಕ್ರಮ ನಡೆಸಲು ನಿರ್ಧರಿಸಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಜನಪ್ರತಿನಿಧಿಗಳನ್ನು ಆಹ್ವಾನಿಸುವುದು, ಕಲಾ ತಂಡಗಳನ್ನು ಅಂತಿಮಗೊಳಿಸುವುದು ಹಾಗೂ ಗಣ್ಯರಿಗೆ ಮುಂಚಿತವಾಗಿ ಆಹ್ವಾನ ಪತ್ರಿಕೆ ಕಳುಹಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾ ಯಿತು.

ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು, ಸಾಹಿತಿಗಳು, ಕನ್ನಡಪರ ಸಂಘಟನೆಗಳು ಹಾಗೂ ಅಭಿಮಾನಿಗಳು ಆಗಮಿಸುವ ಹಿನ್ನೆಲೆಯಲ್ಲಿ ಆಸನ ವ್ಯವಸ್ಥೆ, ಕುಡಿಯುವ ನೀರಿನ ಸೌಲಭ್ಯ, ಕನ್ನಡ ಭವನದ ಸ್ವಚ್ಛತೆ ಸೇರಿದಂತೆ ಅಗತ್ಯ ವ್ಯವಸ್ಥೆಗಳನ್ನು ಕಲ್ಪಿಸಲು ನಿರ್ದೇಶನ ನೀಡಲಾಗಿದೆ. ಕಾರ್ಯಕ್ರಮದ ವೇಳೆ ವಿದ್ಯುತ್ ವ್ಯತ್ಯಯವಾಗದಂತೆ ಕ್ರಮ ಕೈಗೊಳ್ಳಬೇಕು ಹಾಗೂ ಪೊಲೀಸ್ ಇಲಾಖೆ ಸೂಕ್ತ ಬಂದೋ ಬಸ್ತ್ ಒದಗಿಸಬೇಕು ಎಂದು ತಿಳಿಸಲಾಗಿದೆ. ಸಭೆಯಲ್ಲಿ ಮಾತನಾಡಿದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿಜಯಕುಮಾರ ತೇಗಲತಿಪ್ಪಿ, ಡಾ. ರಾಜಕುಮಾರ ಅಭಿಮಾನಿಗಳ ಸಂಘದ ಜಿಲ್ಲಾಧ್ಯಕ್ಷ ರಾಘವೇಂದ್ರ ವಿ. ಕುಲಕರ್ಣಿ, ಸಾಹಿತಿ ಭೀಮಪ್ಪ ಬೋನಾಳ ಸೇರಿದಂತೆ ಹಲವರು, ಡಾ. ರಾಜ್ ಅವರ ಚಿತ್ರಗಳು ಕೇವಲ ಮನರಂಜನೆಗೆ ಸೀಮಿತವಾಗದೇ ಜೀವನದ ಮೌಲ್ಯಗಳನ್ನು ಸಾರುವಂತಿವೆ ಎಂದು ಹೇಳಿದರು.

ನಗರದಲ್ಲಿ ಡಾ. ರಾಜಕುಮಾರ ಅವರ ಪುತ್ಥಳಿ ಸ್ಥಾಪನೆಗೆ ಈ ಹಿಂದೆ ನಿರ್ಧಾರ ಕೈಗೊಂಡಿದ್ದರೂ ಅದು ಇನ್ನೂ ಜಾರಿಗೆ ಬಂದಿಲ್ಲ. ಶ್ರೇಷ್ಠ ಕಲಾವಿದನ ಗೌರವಾರ್ಥವಾಗಿ ಪುತ್ಥಳಿ ಸ್ಥಾಪನೆ, ರಸ್ತೆ ಹೆಸರಿಡುವುದು ಹಾಗೂ ಅವರ ಹೆಸರಿನಲ್ಲಿ ಪ್ರಶಸ್ತಿ ನೀಡುವಂತೆ ಮನವಿ ಮಾಡಿದರು.

ಈ ವೇಳೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕ ಜಡಿಯಪ್ಪ ಗೆದ್ದಲಗಟ್ಟಿ ಅವರು ಡಾ.ರಾಜಕುಮಾರ್ ಅವರ ಜನ್ಮ ದಿನಾಚರಣೆಗೆ ಕೈಗೊಳ್ಳಲಾಗಿರುವ ಸಿದ್ಧತೆಗಳ ಕುರಿತು ಸಭೆಗೆ ವಿವರಿಸಿದರು. ಸಭೆಯಲ್ಲಿ ಸಿ.ಸಿ.ಆರ್.ಬಿ ವಿಭಾಗದ ಎ.ಸಿ.ಪಿ ಸುಧಾ ಆದಿ, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ವಿಜಯಕುಮಾರ ತೇಗಲತಿಪ್ಪಿ ಸೇರಿದಂತೆ ಕಾಲೇಜು ಶಿಕ್ಷಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ತೋಟಗಾರಿಕೆ ಇಲಾಖೆ, ಜೆಸ್ಕಾಂ, ಮಹಾನಗರ ಪಾಲಿಕೆಯ ಅಧಿಕಾರಿಗಳು ಸೇರಿದಂತೆ ಅನೇಕ ಸಂಘ-ಸಂಸ್ಥೆಗಳು ಮುಖಂಡರು, ಡಾ.ರಾಜ್ ಅಭಿಮಾನಿಗಳು ಭಾಗವಹಿಸಿದ್ದರು.

ಬಳ್ಳಾರಿ ಜಿಲ್ಲೆಯಲ್ಲಿ ಡೆಂಗ್ಯೂ ಹರಡದಂತೆ ಕಟ್ಟೆಚ್ಚರ



ಬಳ್ಳಾರಿ,ಏ.23-

ಜಿಲ್ಲೆಯಲ್ಲಿ ಡೆಂಗ್ಯೂ ರೋಗ ಹರಡುವುದನ್ನು ತಡೆಗಟ್ಟಲು ಮತ್ತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಆರೋಗ್ಯ ಇಲಾಖೆ ಸಮರೋಪಾದಿಯಲ್ಲಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ. ಜಿಲ್ಲಾಧಿಕಾರಿಗಳ ಕಟ್ಟುನಿಟ್ಟಿನ ಸೂಚನೆಯ ಮೇರೆಗೆ ಮನೆ-ಮನೆ ಭೇಟಿ, ಲಾರ್ವಾ ಸಮೀಕ್ಷೆ ಮತ್ತು ಸೊಳ್ಳೆ ನಿಯಂತ್ರಣ ಕಾರ್ಯಕ್ರಮಗಳನ್ನು ತೀವ್ರಗೊಳಿಸಲಾಗಿದೆ ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ ಅವರು ತಿಳಿಸಿದ್ದಾರೆ.

ಡೆಂಗ್ಯೂ ಎಂಬುದು ಈಡಿಸ್ ಈಜಿಪ್ಟಿ ಎಂಬ ಹೆಣ್ಣು ಸೊಳ್ಳೆಯ ಕಡಿತದಿಂದ ಹರಡುವ ವೈರಲ್ ಸೋಂಕು. ಸೊಳ್ಳೆ ಕಚ್ಚಿದ 4 ರಿಂದ 10 ದಿನಗಳಲ್ಲಿ ಹಠಾತ್ ತೀವ್ರ ಜ್ವರ, ತೀವ್ರ ತಲೆನೋವು, ಕಣ್ಣುಗಳ ಹಿಂಭಾಗದಲ್ಲಿ ನೋವು, ಸ್ನಾಯು, ಮೂಳೆ, ಕೀಲುಗಳಲ್ಲಿ ವಿಪರೀತ ನೋವು, ವಾಕರಿಕೆ, ವಾಂತಿ ಮತ್ತು ಚರ್ಮದ ಮೇಲೆ ಕೆಂಪು ದದ್ದು ಲಕ್ಷಣಗಳು ಕಾಣಿಸಿಕೊಳ್ಳುತ್ತವೆ.

ತೀವ್ರ ಹೊಟ್ಟೆ ನೋವು, ಮೂಗಿನಿಂದ ರಕ್ತಸ್ರಾವ ಹಾಗೂ ಪ್ಲೇಟ್‌ಲೆಟ್ ಸಂಖ್ಯೆಯಲ್ಲಿ ಹಠಾತ್ ಇಳಿಕೆಯಾದಲ್ಲಿ ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು ಎಂದು ಅವರು ತಿಳಿಸಿದ್ದಾರೆ.

★ಆರೋಗ್ಯ ಇಲಾಖೆಯಿಂದ ಕೈಗೊಳ್ಳಲಾದ ಕ್ರಮಗಳು:★

★ಮನೆ-ಮನೆ ಭೇಟಿ:★★ ಆಶಾ ಕಾರ್ಯಕರ್ತೆಯರು ತಿಂಗಳಿಗೆ ಎರಡು ಬಾರಿ ಪ್ರತಿಯೊಂದು ಮನೆಗೆ ಭೇಟಿ ನೀಡಿ, ಸಂಗ್ರಹಿಸಿಟ್ಟ ನೀರಿನ ಪರಿಕರಗಳಲ್ಲಿ ಲಾರ್ವಾ (ಸೊಳ್ಳೆ ಮೊಟ್ಟೆ) ಇದೆಯೇ ಎಂದು ಪರೀಕ್ಷಿಸುತ್ತಿದ್ದಾರೆ.

★ವಿಶೇಷ ಲಾರ್ವಾ ಸಮೀಕ್ಷೆ:★ ಬಳ್ಳಾರಿ ನಗರ, ಸಿರುಗುಪ್ಪ ಮತ್ತು ಸಂಡೂರು ನಗರ ಪ್ರದೇಶಗಳಲ್ಲಿ ಪ್ರತಿ ಶುಕ್ರವಾರ ಮತ್ತು ಶನಿವಾರದಂದು ವಿಶೇಷ ಸಮೀಕ್ಷೆ ನಡೆಸಿ ಲಾರ್ವಾ ತಾಣಗಳನ್ನು ನಿರ್ಮೂಲನೆ ಮಾಡಲಾಗುತ್ತಿದೆ.

★ವೈರಾಣು ಪತ್ತೆ:★ ಜಿಲ್ಲೆಯ 70 ಪ್ರದೇಶಗಳಿಂದ ಸೊಳ್ಳೆಗಳನ್ನು ಸಂಗ್ರಹಿಸಿ ಬೆಂಗಳೂರಿನ ಎನ್‌ಐವಿ ಸಂಸ್ಥೆಗೆ ಪರೀಕ್ಷೆಗೆ ಕಳುಹಿಸಲಾಗಿತ್ತು. ಇದರಲ್ಲಿ 7 ಪ್ರದೇಶಗಳಲ್ಲಿ ಡೆಂಗ್ಯೂ ವೈರಾಣು ಪತ್ತೆಯಾಗಿದ್ದು, ಅಂತಹ ಕಡೆಗಳಲ್ಲಿ ಸಮರೋಪಾದಿಯಲ್ಲಿ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಗಿದೆ.

★ರಾಸಾಯನಿಕ ಸಿಂಪಡಣೆ:★ ಸೊಳ್ಳೆಗಳ ನಿಯಂತ್ರಣಕ್ಕಾಗಿ ಬಿಟಿಐ ಮತ್ತು ಥೆಮಿಫಾಸ್ ದ್ರಾವಣಗಳನ್ನು ಸಿಂಪಡಿಸಲಾಗುತ್ತಿದೆ. ತುರ್ತು ಪರಿಸ್ಥಿತಿ ಇರುವ ಕಡೆಗಳಲ್ಲಿ ಒಳಾಂಗಣ ಧೂಮೀಕರಣ ಮಾಡಲಾಗುತ್ತಿದೆ.

★ಸಾರ್ವಜನಿಕರಿಗೆ ಮನವಿ:★

ಡೆಂಗ್ಯೂ ನಿಯಂತ್ರಣ ಕೇವಲ ಸರ್ಕಾರದ ಕೆಲಸವಲ್ಲ, ಇದರಲ್ಲಿ ಸಾರ್ವಜನಿಕರ ಸಹಕಾರವೂ ಅಗತ್ಯ. ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಸೊಳ್ಳೆ ಪರದೆಗಳನ್ನು ಬಳಸಬೇಕು ಹಾಗೂ ಮೈ ಪೂರ್ಣ ಮುಚ್ಚುವ ಬಟ್ಟೆಗಳನ್ನು ಧರಿಸಬೇಕು.

ಸಾರ್ವಜನಿಕರು ಯಾವುದೇ ಜ್ವರ ಬಂದರೂ ನಿರ್ಲಕ್ಷಿಸದೇ, ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಬೇಕು. ಚಿಕಿತ್ಸೆಗಾಗಿ ವೈದ್ಯರ ಸಲಹೆಯಂತೆ ಪ್ಯಾರಸಿಟಮಾಲ್ ಮಾತ್ರ ಬಳಸಬೇಕು, ಸ್ವಯಂ ಚಿಕಿತ್ಸೆ ಅಪಾಯಕಾರಿ ಎಂದು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಮರಿಯಂಬಿ ವಿ.ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈರುಳ್ಳಿ ಬೆಳೆದು ಕಣ್ಣೀರು ಹಾಕುತ್ತಿರುವ ರೈತರು, ನೆರವಿಗೆ ಬಾರದ ಸರ್ಕಾರ



ಈರುಳ್ಳಿ ದರ ಕುಸಿತವು ಕೇವಲ ಕೃಷಿ ಸಮಸ್ಯೆಯಲ್ಲ, ಅದು ಸಾಮಾಜಿಕ-ಆರ್ಥಿಕ ಸಂಕಷ್ಟದ ಸೂಚಕವಾಗಿದೆ. ರೈತರ ಕಣ್ಣೀರು ಒರೆಸಲು, ಸರ್ಕಾರಗಳ ದೃಢ ನೀತಿ, ಸಮಗ್ರ ಯೋಜನೆ ಮತ್ತು ಸಮಯೋಚಿತ ಹಸ್ತಕ್ಷೇಪ ಅವಶ್ಯಕವಾಗಿದೆ. ಇಲ್ಲವಾದರೆ, 'ಬೆಳೆದಷ್ಟೂ ನಷ್ಟ' ಎಂಬ ನೇಣಿಗೆ ಸಿದ್ಧರಾಗಬೇಕಾಗುತ್ತದೆ.

ಭಾರತದ ಈರುಳ್ಳಿಗೆ ಗಲ್ಫ್ ದೇಶಗಳಲ್ಲಿ ಭಾರೀ ಬೇಡಿಕೆಯಿದೆ. ಆದರೆ ಆ ಗಲ್ಫ್ ದೇಶಗಳ ಮೇಲೆ ಈಗ ಯುದ್ಧವೆಂಬ ಕಾರ್ಮೋಡ ಕವಿದಿದೆ. ಯುದ್ಧದಿಂದಾಗಿ ದುಬೈ ಮಾರುಕಟ್ಟೆ ಮುಚ್ಚಿದೆ. ಭಾರತದಿಂದ ದುಬೈಗೆ ರಫ್ತಾಗುತ್ತಿದ್ದ ಈರುಳ್ಳಿ ಗಣನೀಯ ಪ್ರಮಾಣದಲ್ಲಿ ಕುಸಿತ ಕಂಡಿದೆ. ರಫ್ತು ವಹಿವಾಟು ಹೆಚ್ಚೂ ಕಡಿಮೆ ಸ್ಥಗಿತಗೊಂಡಿದೆ.

ಇದೇ ಸಂದರ್ಭದಲ್ಲಿ ಕೊಲ್ಲಿ ಯುದ್ಧದಿಂದಾಗಿ ಅಡುಗೆ ಅನಿಲ ಸಿಲಿಂಡರ್ ಸರಬರಾಜು ವ್ಯತ್ಯಯವಾಗಿದೆ. ಅದರಲ್ಲೂ ವಾಣಿಜ್ಯ ಬಳಕೆಯ ಸಿಲಿಂಡರ್ ಬೆಲೆ ಹೆಚ್ಚಾಗಿದೆ. ಒಂದು ಕಡೆ ಕೊರತೆ, ಮತ್ತೊಂದು ಕಡೆ ಬೆಲೆ ಏರಿಕೆ. ಇದರಿಂದ ಬಹುತೇಕ ಹೋಟೆಲ್, ಡಾಬಾ, ಪಿಜಿಗಳು ಮುಚ್ಚಿವೆ. ಇವು ಮುಚ್ಚಿರುವುದರಿಂದ ಈರುಳ್ಳಿ ಬೇಡಿಕೆ, ಈ ವಲಯದಿಂದಲೂ ಕಡಿಮೆಯಾಗಿದೆ.

ದುರದೃಷ್ಟಕರ ಸಂಗತಿ ಎಂದರೆ, ಭಾರತದಲ್ಲಿ ಈರುಳ್ಳಿ ಉತ್ಪಾದಿಸುವ ಪ್ರಮುಖ ರಾಜ್ಯಗಳಲ್ಲಿ ಕರ್ನಾಟಕವು ಒಂದಾಗಿದ್ದು, ಮುಖ್ಯವಾಗಿ ಉತ್ತರ ಕರ್ನಾಟಕದ 12 ಜಿಲ್ಲೆಗಳಲ್ಲಿ, ಸುಮಾರು 2.40 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಈರುಳ್ಳಿ ಬೆಳೆಯಲಾಗುತ್ತದೆ. ಈ ಬಾರಿಯ ಬೇಸಿಗೆ ಬೆಳೆ ಕೈಗೆ ಬಂದಿದೆ. ಉತ್ಪಾದನೆ ಹೆಚ್ಚಾಗಿದೆ. ಹೊಲದ ಬದುವಿನಲ್ಲಿ ರಾಶಿ ರಾಶಿ ಬಿದ್ದಿದೆ.

ಕೈಗೆ ಬಂದ ಬೆಳೆ ತಕ್ಷಣ ವಿಲೇವಾರಿಯಾಗಬೇಕು, ಇಲ್ಲವೇ ಗ್ರಾಮಗಳ ಮಟ್ಟದಲ್ಲಿ ಶೀತಗೃಹಗಳಲ್ಲಿ ಸಂರಕ್ಷಿಸಿಡುವ ವ್ಯವಸ್ಥೆ ಆಗಬೇಕು. ಆದರೆ, ಹೊರದೇಶಕ್ಕೆ ಸರಬರಾಜು ಆಗುತ್ತಿದ್ದ ರಫ್ತು ನಿಂತಿದೆ. ಇನ್ನೊಂದು ಕಡೆ ಸ್ಥಳೀಯವಾಗಿ ಬೇಡಿಕೆಯೂ ಕುಸಿದಿದೆ. ಇದರಿಂದ ಈರುಳ್ಳಿಯನ್ನು ಕೇಳುವವರೇ ಇಲ್ಲವಾಗಿದೆ.

ಏಪ್ರಿಲ್ ಮೊದಲ ವಾರದಲ್ಲಿ ಕ್ವಿಂಟಲ್‌ಗೆ ಒಂದೂವರೆ ಸಾವಿರದವರೆಗೆ ಇದ್ದ ಬೆಲೆ, ಈಗ ದಿಢೀರ್ ಕುಸಿದಿದೆ. ಕಳೆದ ವರ್ಷದ ಮುಂಗಾರಿನ ಇದೇ ಸಂದರ್ಭದಲ್ಲಿ ಒಂದು ಕ್ವಿಂಟಲ್‌ಗೆ 3ರಿಂದ 4 ಸಾವಿರ ಬೆಲೆ ಇತ್ತು. ಇದರಿಂದ ಉತ್ತೇಜಿತರಾದ ಉತ್ತರ ಕರ್ನಾಟಕ ಭಾಗದ ರೈತರು, ಹಿಂದು ಮುಂದು ನೋಡದೆ ಯಥೇಚ್ಛವಾಗಿ ಈರುಳ್ಳಿ ಬಿತ್ತನೆ ಮಾಡಿದ್ದರು. ಉತ್ತಮ ಇಳುವರಿಯೂ ಬಂದಿದೆ. ಆದರೆ ಈಗ ರೈತರು ಮಾರಲು ಮುಂದಾದರೆ, ಕ್ವಿಂಟಲ್‌ಗೆ ಆರು ನೂರಕ್ಕೂ ಕೇಳುವವರಿಲ್ಲ.

ಒಂದು ಎಕರೆ ಈರುಳ್ಳಿ ಬೆಳೆಯಲು ಬೀಜ, ಸಸಿ ನಾಟಿ, ಗೊಬ್ಬರ, ಔಷಧಿ, ಕೂಲಿ ಎಲ್ಲಾ ಸೇರಿ ಕಡಿಮೆ ಎಂದರೂ 60 ಸಾವಿರ ರೂಪಾಯಿ ಖರ್ಚಾಗುತ್ತದೆ. ಒಂದು ಎಕರೆಯಲ್ಲಿ ಸುಮಾರು 100ರಿಂದ 120 ಕ್ವಿಂಟಲ್ ಈರುಳ್ಳಿ ಬೆಳೆದರೂ, ಸದ್ಯದ ಮಾರುಕಟ್ಟೆ ಬೆಲೆಯಂತೆ ಕ್ವಿಂಟಲ್‌ಗೆ 600 ರೂಪಾಯಿ ಸಿಕ್ಕರೂ, ಅಸಲು ಕೂಡ ಗಿಟ್ಟುವುದಿಲ್ಲ. ನಷ್ಟ ತಲೆ ಮೇಲೆ ಬೀಳುತ್ತದೆ. ಸಾಲ-ಬಡ್ಡಿಯ ಹೊರೆ ಹೆಚ್ಚಾಗುತ್ತದೆ. ಅದರಲ್ಲೂ, ಉತ್ತಮ ಗುಣಮಟ್ಟದ ಈರುಳ್ಳಿಯಾಗಿದ್ದರೆ ಕ್ವಿಂಟಲ್‌ಗೆ 600. ಕಡಿಮೆ ಗಾತ್ರದ, ಗುಣಮಟ್ಟವಿಲ್ಲದ ಈರುಳ್ಳಿಯನ್ನು ಕೇಳುವವರೂ ಇಲ್ಲ. ಅಕಸ್ಮಾತ್ ಮಳೆ ಬಂದರೆ, ಬೆಳೆ ಕೊಳೆತರೆ ಕೈಗೆ ಬಂದದ್ದು ಬಾಯಿಗಿಲ್ಲ.

ಈ ಸ್ಥಿತಿ ಎದುರಾಗಲು ಹಲವು ಕಾರಣಗಳಿವೆ. ಮೊದಲನೆಯದಾಗಿ, ಅತಿಯಾದ ಉತ್ಪಾದನೆ. ಉತ್ತಮ ಮಳೆಯ ಪರಿಣಾಮವಾಗಿ ಈರುಳ್ಳಿ ಬೆಳೆಯ ಉತ್ಪಾದನೆ ಹೆಚ್ಚಾಗಿದೆ. ಆದರೆ ಅದಕ್ಕೆ ತಕ್ಕಂತೆ ಬೇಡಿಕೆ ಇಲ್ಲವಾಗಿದೆ. ಅದು ಮಾರುಕಟ್ಟೆಯಲ್ಲಿ ಬೆಲೆ ಕುಸಿತಕ್ಕೆ ಕಾರಣವಾಗಿದೆ. ಎರಡನೆಯದಾಗಿ, ಶೀತಗೃಹ (ಕೋಲ್ಡ್ ಸ್ಟೋರೇಜ್)ಗಳ ಕೊರತೆ. ರೈತರು, ತಾವು ಬೆಳೆದ ಉತ್ಪನ್ನವನ್ನು ತುಂಬಾ ದಿನಗಳ ಕಾಲ ಸಂಗ್ರಹಿಸಿಟ್ಟುಕೊಳ್ಳಲು ಬೇಕಾದ ಶೀತಗೃಹಗಳ ವ್ಯವಸ್ಥೆ ಇಲ್ಲ. ಜೊತೆಗೆ ರೈತರು ಸಾಲ ಮಾಡಿ ಬೆಳೆ ಬೆಳೆದಿರುತ್ತಾರೆ. ಬೆಳೆ ಬಂದಾಕ್ಷಣ ಸಿಕ್ಕಷ್ಟು ಬೆಲೆಗೆ ಮಾರುವ ಒತ್ತಡಕ್ಕೆ ಒಳಗಾಗುತ್ತಾರೆ. ಮೂರನೆಯದಾಗಿ, ಮಧ್ಯವರ್ತಿಗಳು ಮಾರುಕಟ್ಟೆಯನ್ನು ಹಿಡಿತದಲ್ಲಿಟ್ಟುಕೊಂಡಿದ್ದಾರೆ. ಮಾರುಕಟ್ಟೆಯಲ್ಲಿ ರೈತರಿಗೆ ನ್ಯಾಯಸಮ್ಮತ ಬೆಲೆ ಸಿಗದೆ, ಲಾಭದ ದೊಡ್ಡ ಪಾಲು ಮಧ್ಯವರ್ತಿಗಳ ಪಾಲಾಗುತ್ತದೆ. ನಾಲ್ಕನೆಯದಾಗಿ, ದೇಶದ ವಿದೇಶಾಂಗ ನೀತಿ, ಆಮದು-ರಫ್ತು ವಹಿವಾಟಿನ ಅಸ್ಥಿರತೆ ಮತ್ತು ಸರ್ಕಾರದ ನಿಲುವು- ಉತ್ಪನ್ನಗಳ ಮೇಲೆ ನೇರ ಪರಿಣಾಮ ಬೀರುತ್ತದೆ.

ಜೊತೆಗೆ ಕೇಂದ್ರ-ರಾಜ್ಯ ಸರ್ಕಾರಗಳ ಕೃಷಿ ನೀತಿಗಳು, ಮಾರುಕಟ್ಟೆ ನಿಯಮಗಳು, ತೆರಿಗೆ ಪದ್ಧತಿಗಳು- ಇವತ್ತಿಗೂ ರೈತರನ್ನೇ ಹೊರಗಿಟ್ಟು ರೂಪಿಸಲಾಗುತ್ತಿದೆ. ಉದಾಹರಣೆಗೆ ಈರುಳ್ಳಿ ಮೇಲೆ ಭಾರತ ಸರ್ಕಾರ ಶೇ. 40 ರಫ್ತು ತೆರಿಗೆ ವಿಧಿಸಿದೆ. ಕಬ್ಬು ಬೆಳೆಯುವ ರೈತರಿಗೆ ಬೆಂಬಲ ಬೆಲೆ ಇದೆ. ನಿಧಾನವಾದರೂ ನೆರವಿಗೆ ಧಾವಿಸುವುದಿದೆ. ಆದರೆ ಈರುಳ್ಳಿ ಬೆಳೆಗೆ ಬೆಲೆಯೂ ಇಲ್ಲ, ಧ್ವನಿ ಎತ್ತುವವರೂ ಇಲ್ಲ.

ಇದನ್ನು ಮನಗಂಡ ರೈತರು ಈಗ ಸಂಘಟಿತರಾಗಿ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮಾರುಕಟ್ಟೆ ಬೆಲೆ ವ್ಯತ್ಯಾಸ ಪಾವತಿ ಯೋಜನೆ'(ಪಿಡಿಪಿಎಸ್) ಜಾರಿಗೊಳಿಸಿ ರೈತರಿಗೆ ನೆರವಾಗಬೇಕೆಂದು ಆಗ್ರಹಿಸಿದ್ದಾರೆ. ರಾಜ್ಯ ಬೆಲೆ ಆಯೋಗಕ್ಕೂ ಮನವಿ ಸಲ್ಲಿಸಿದ್ದಾರೆ. ಆದರೆ ಅದು ಆಗ್ರಹ-ಮನವಿ ಮಟ್ಟದಲ್ಲಿಯೇ ಉಳಿದಿದೆ. ಈರುಳ್ಳಿ ದರ ಕುಸಿತವು ಕೇವಲ ಕೃಷಿ ಸಮಸ್ಯೆಯಲ್ಲ, ಅದು ಸಾಮಾಜಿಕ-ಆರ್ಥಿಕ ಸಂಕಷ್ಟದ ಸೂಚಕವಾಗಿದೆ. ರೈತರ ಕಣ್ಣೀರು ಒರೆಸಲು, ಸರ್ಕಾರಗಳ ದೃಢ ನೀತಿ, ಸಮಗ್ರ ಯೋಜನೆ ಮತ್ತು ಸಮಯೋಚಿತ ಹಸ್ತಕ್ಷೇಪ ಅವಶ್ಯಕವಾಗಿದೆ. ಇಲ್ಲವಾದರೆ, ಬೆಳೆದಷ್ಟೂ ನಷ್ಟ ಎಂಬ ನೇಣಿಗೆ ಸಿದ್ಧರಾಗಬೇಕಾಗುತ್ತದೆ.

ದೇಶದ ಬೆನ್ನೆಲುಬು ರೈತ ಎಂದು ಭಾಷಣ ಬಿಗಿಯುವ ರಾಜಕೀಯ ನಾಯಕರು, ಅಧಿಕಾರದ ಕುರ್ಚಿ ಮೇಲೆ ಕೂರುತ್ತಿದ್ದಂತೆ ರೈತವಿರೋಧಿಯಾಗಿ ಮಾರ್ಪಾಡಾಗಿರುತ್ತಾರೆ. 2019ರಲ್ಲಿ ಈರುಳ್ಳಿ ಬೆಲೆ ಏರಿಕೆ ಕುರಿತು ಸಂಸತ್ತಿನಲ್ಲಿ ಚರ್ಚೆ ನಡೆಯುತ್ತಿರುವಾಗ, ನಾನು ಈರುಳ್ಳಿ ತಿನ್ನುವುದಿಲ್ಲ. ಈರುಳ್ಳಿ-ಬೆಳ್ಳುಳ್ಳಿ ತಿನ್ನದ ಕುಟುಂಬ ನನ್ನದು ಎಂಬ ಉಡಾಫೆಯ ಮಾತುಗಳು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್‌ರಿಂದ ಬಂದಿದ್ದವು. ಮೊನ್ನೆ ಪಶ್ಚಿಮ ಬಂಗಾಳದ ಚುನಾವಣಾ ಸಂದರ್ಭದಲ್ಲಿ ಬೀದಿ ಬದಿಯ ಝಲ್ಮುರಿ ಖರೀದಿಸಿದ ಪ್ರಧಾನಿ ಮೋದಿಯವರಿಗೆ ವ್ಯಾಪಾರಿ, ಈರುಳ್ಳಿ ಹಾಕಲಾ ಎಂದರೆ, ಈರುಳ್ಳಿ ತಿನ್ನುತ್ತೇನೆ, ಮೆದುಳನ್ನಲ್ಲ ಎಂದು ಹಾಸ್ಯ ಚಟಾಕಿ ಹಾರಿಸಿದ್ದರು.

ಒಬ್ಬರು ಈರುಳ್ಳಿ ತಿನ್ನದವರು, ಇನ್ನೊಬ್ಬರು ತಿನ್ನುವವರು. ಇಬ್ಬರಿಗೂ ಈರುಳ್ಳಿ ಬೆಳೆಯುವ ರೈತನ ಕಷ್ಟ ಗೊತ್ತಿಲ್ಲ. ರೈತರು ಬುದ್ಧಿವಂತರಾಗದೇ ಬದುಕಿಲ್ಲ.

ಬಳ್ಳಾರಿಯಲ್ಲಿ ಭವ್ಯ ಅಶ್ವರೂಢ ಬಸವಣ್ಣನ ಪ್ರತಿಮೆ ನಿರ್ಮಾಣ: ಶಾಸಕ ನಾರಾ ಭರತ್ ರೆಡ್ಡಿ

ಬಳ್ಳಾರಿ,ಏ.23-

ನಗರದ ಜನತೆಯ ಬಹುದಿನಗಳ ಬೇಡಿಕೆಯಾಗಿದ್ದ ಅಶ್ವರೂಢ ಬಸವಣ್ಣನ ಪ್ರತಿಮೆಯನ್ನು ಅತ್ಯಂತ ಶೀಘ್ರದಲ್ಲಿಯೇ ಬಳ್ಳಾರಿಯಲ್ಲಿ ಅನಾವರಣಗೊಳಿಸಲಾಗುವುದು ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದಲ್ಲಿ ಸೋಮವಾರ ಆಯೋಜಿಸಿದ್ದ ಮಹಾಮಾನವತವಾದಿ ಸಾಂಸ್ಕೃತಿಕ ನಾಯಕ ಶ್ರೀ ಬಸವೇಶ್ವರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕೆಲವು ತಾಂತ್ರಿಕ ಕಾರಣಗಳಿಂದ ಪ್ರತಿಮೆ ಉದ್ಘಾಟನೆ ವಿಳಂಬವಾಗಿದ್ದು, ಮುಂದಿನ ಬಸವ ಜಯಂತಿಯವರೆಗೆ ಕಾಯದೇ, ಕೇವಲ ಆರು ತಿಂಗಳೊಳಗೆ ಶಾಸಕರ ಸ್ವಂತ ಖರ್ಚಿನಲ್ಲಿ ಭವ್ಯ ಅಶ್ವರೂಢ ಬಸವಣ್ಣನ ಪ್ರತಿಮೆಯನ್ನು ನಿರ್ಮಿಸಿ ಲೋಕಾರ್ಪಣೆ ಮಾಡಲಾಗುವುದು ಎಂದು ಅವರು ತಿಳಿಸಿದರು.

ಪ್ರತಿಮೆ ಸ್ಥಾಪನೆಗೆ ಬೇಕಾದ ಜಮೀನಿನ ಕುರಿತು ಈಗಾಗಲೇ ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಲಾಗಿದೆ. ಕ್ಯಾಬಿನೆಟ್ ಮಟ್ಟದಲ್ಲಿ ಆಗಬೇಕಾದ ಅನುಮತಿ ಹಾಗೂ ಕಾನೂನು ಪ್ರಕ್ರಿಯೆಗಳನ್ನು ಶೀಘ್ರವಾಗಿ ಮುಗಿಸಿ ಕಾರ್ಯರೂಪಕ್ಕೆ ತರಲಾಗುವುದು ಎಂದು ಭರತ್ ರೆಡ್ಡಿ ಹೇಳಿದರು.

ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರ ಬಸವ ತತ್ವದ ಮೇಲೆ ನಡೆಯುತ್ತಿದ್ದು, ಈಗಾಗಲೇ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ' ಎಂದು ಘೋಷಿಸಲಾಗಿದೆ. ಪ್ರತಿಯೊಂದು ಸರ್ಕಾರಿ ಕಚೇರಿಯಲ್ಲಿ ಅವರ ಭಾವಚಿತ್ರ ಇರಬೇಕು ಎಂಬ ನಿಯಮವನ್ನು ಜಾರಿಗೆ ತರಲಾಗಿದೆ. ಬಸವಣ್ಣನವರ ದಾಸೋಹ ತತ್ವದಿಂದ ಪ್ರೇರಿತರಾಗಿ ಸಿದ್ದರಾಮಯ್ಯನವರು 2013ರಲ್ಲೇ ಅನ್ನಭಾಗ್ಯ' ಯೋಜನೆಯನ್ನು ಜಾರಿಗೆ ತಂದಿದ್ದರು ಎಂದು ಅವರು ಶ್ಲಾಘಿಸಿದರು.

ಬಸವ ಜಯಂತಿಯಂದೇ ಹೊಸಪೇಟೆಯಲ್ಲಿ ಶುಗರ್ ಪ್ಲಾಂಟ್ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲಾಗಿದೆ. ರೈತರಿಗೆ ಅನುಕೂಲವಾಗಲೆಂದು ಮುಖ್ಯಮಂತ್ರಿಗಳು ನೀಡಿದ್ದ ಭರವಸೆಯಂತೆ ಈ ಕಾರ್ಯಕ್ಕೆ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು.

ಮಹಾನಗರ ಪಾಲಿಕೆ ಮೇಯರ್ ಪಿ.ಗಾದೆಪ್ಪ ಅವರು ಮಾತನಾಡಿ, ಬಸವಣ್ಣನವರು ಜಾತಿ-ಮತಗಳ ಭೇದವಿಲ್ಲದೆ ಎಲ್ಲರನ್ನೂ ಒಗ್ಗೂಡಿಸಲು ಅನುಭವ ಮಂಟಪ' ಎಂಬ ಸಂಸತ್ತನ್ನು ಸ್ಥಾಪಿಸಿದರು. ಅವರ ವಚನ ಸಾಹಿತ್ಯವು ಇಂದಿಗೂ ಇಡೀ ವಿಶ್ವಕ್ಕೆ ಮಾದರಿಯಾಗಿದೆ. ಅಂದಿನ ಕಾಲದಲ್ಲಿ ಸುಮಾರು ಅನೇಕ ಶರಣರನ್ನು ಒಗ್ಗೂಡಿಸಿ, ಸಮಾಜದ ಏಳಿಗೆಗಾಗಿ ಅವರು ಹಾಕಿಕೊಟ್ಟ ದಾರಿ ಇಂದಿನ ಪೀಳಿಗೆಗೆ ಆದರ್ಶಪ್ರಾಯವಾಗಿದೆ ಎಂದು ಶ್ಲಾಘಿಸಿದರು.

ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಬಸವಣ್ಣನವರು 800 ವರ್ಷಗಳ ಹಿಂದೆಯೇ ಅನುಭವ ಮಂಟಪದ ಮೂಲಕ ಪ್ರಜಾಪ್ರಭುತ್ವದ ಅಡಿಪಾಯ ಹಾಕಿದ್ದರು. ಅವರ ತತ್ವಗಳನ್ನು ಅನುಸರಿಸುವ ಮೂಲಕ ಭಾರತವನ್ನು ವಿಶ್ವಗುರುವಾಗಿ ಮಾಡಬಹುದು ಎಂದು ಅಭಿಪ್ರಾಯಪಟ್ಟರು.

ಭಾರತದ ಸಂವಿಧಾನದ ಪೀಠಿಕೆಯಲ್ಲಿರುವ ನ್ಯಾಯ, ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವದಂತಹ ಮೌಲ್ಯಗಳು ಬಸವಣ್ಣನವರ ವಚನಗಳಲ್ಲಿ ಮೊದಲೇ ಅಡಕವಾಗಿವೆ. ಬಸವಣ್ಣನವರು ತೋರಿಸಿದ ದಾರಿಯಲ್ಲಿ ನಡೆದು ನವ ಭಾರತ ನಿರ್ಮಾಣ ಮಾಡೋಣ ಎಂದು ಕರೆ ನೀಡಿದರು.

ಎಸ್ಪಿ ಡಾ.ಸುಮನ್ ಡಿ.ಪನ್ನೇಕರ್ ಅವರು ಮಾತನಾಡಿ, ಬಸವಣ್ಣನವರ ತತ್ವಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡರೆ ಜೀವನ ಸಾರ್ಥಕವಾಗುತ್ತದೆ. ಕೆಲಸಕ್ಕಿಂತ ದೊಡ್ಡದು ಯಾವುದೂ ಇಲ್ಲ. ನಮ್ಮ ಕಾಯಕದಲ್ಲಿ ಆಸಕ್ತಿ ಮತ್ತು ಸಂಪೂರ್ಣವಾಗಿ ತೊಡಗಿಸಿಕೊಂಡರೆ, ಅದೇ ದೇವರನ್ನು ಕಾಣುವ ಹಾದಿಯಾಗುತ್ತದೆ. ಪ್ರಸ್ತುತ ಕಾಲಘಟ್ಟದಲ್ಲಿ ಪ್ರತಿಯೊಬ್ಬರೂ ತಮ್ಮ ಕೆಲಸಗಳನ್ನು ನಿಷ್ಠೆ, ನಿಸ್ವಾರ್ಥ ಮತ್ತು ಕಾಳಜಿಯಿಂದ ಮಾಡುವುದು ಅತ್ಯಂತ ಅವಶ್ಯಕವಾಗಿದೆ ಎಂದು ಹೇಳಿದರು.

ಬಸವಣ್ಣನವರ ವಚನಗಳು ಕೇವಲ ನಾಲ್ಕು ಸಾಲುಗಳಿದ್ದರೂ, ಅವುಗಳಲ್ಲಿ ಬದುಕಿನ ಸತ್ಯ, ಪ್ರಾಮಾಣಿಕತೆ ಮತ್ತು ಜನರ ನಡುವಿನ ನಡವಳಿಕೆಯ ಬಗ್ಗೆ ಆಳವಾದ ಅರ್ಥವಿದೆ. ಬಸವಣ್ಣನವರ ತತ್ವದಂತೆ ನಮ್ಮ ದೇಹ ಮತ್ತು ಮನಸ್ಸನ್ನೇ ದೇಗುಲವಾಗಿಸಿಕೊಳ್ಳಬೇಕು. ಶ್ರದ್ಧೆಯಿಂದ ಕೆಲಸ ಮಾಡುವುದೇ ನಿಜವಾದ ಭಕ್ತಿ ಎಂದು ಅವರು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಅವರು ಮಾತನಾಡಿ, ಬಸವಣ್ಣನವರ ಸರಳತೆ ಅನುಕರಣೀಯವಾಗಿದ್ದು, ಜಾತಿ ಪದ್ಧತಿಯ ವಿರುದ್ಧದ ಅವರ ಹೋರಾಟ ಮತ್ತು ಸಮಾನತೆಯ ತತ್ವಗಳು ಇಂದಿನ ಸಂಕೀರ್ಣ ಸಮಾಜಕ್ಕೆ ಅತ್ಯಂತ ಅವಶ್ಯಕವಾಗಿವೆ. ಬಸವಣ್ಣನವರ ವಚನಗಳನ್ನು ಮತ್ತು ಆದರ್ಶಗಳನ್ನು ಜೀವನದಲ್ಲಿ ಪಾಲಿಸುವುದರಿಂದ ಅನೇಕ ಜಟಿಲ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕುರುಗೋಡು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ.ತಿಪ್ಪೇರುದ್ರ ಸಂಡೂರು ಅವರು ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ವಚನ ಸಾಹಿತ್ಯ ಪರೀಕ್ಷೆಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳನ್ನು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ವ್ಯಕ್ತಿಗಳನ್ನು ಗಣ್ಯರು ಸನ್ಮಾನಿಸಿ ಗೌರವಿಸಿದರು. ಇದಕ್ಕೂ ಮುನ್ನ ಸಂವಿಧಾನ ಪೀಠಿಕೆ ಬೋಧಿಸಲಾಯಿತು. ಬಳ್ಳಾರಿಯ ರೇಖಾ. ಎಸ್.ವಿ ತಂಡ ಭಕ್ತಿ ಸಂಗೀತ ಪ್ರಸ್ತುತ ಪಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಮಹಾನಗರ ಪಾಲಿಕೆ ಸದಸ್ಯರು, ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಭವ್ಯ ಮೆರವಣಿಗೆ: ಜಯಂತಿ ಅಂಗವಾಗಿ ನಗರದಲ್ಲಿ ಭವ್ಯ ಮೆರವಣಿಗೆ ನಡೆಯಿತು. ಶಾಸಕ ನಾರಾ ಭರತ್ ರೆಡ್ಡಿ ಅವರು ಚಾಲನೆ ನೀಡಿದರು. ಮುನಿಸಿಪಲ್ ಕಾಲೇಜು ಮೈದಾನದಿಂದ ಆರಂಭವಾದ ಮೆರವಣಿಗೆಯು ವಿವಿಧ ಸಾಂಸ್ಕೃತಿಕ ಕಲಾ ತಂಡಗಳ ಮೂಲಕ ಗಡಿಗಿ ಚೆನ್ನಪ್ಪ ವೃತ್ತ, ಬೆಂಗಳೂರು ರಸ್ತೆ, ಹಳೆಯ ಬ್ರೂಸ್‌ಪೇಟೆ ಪೊಲೀಸ್ ಠಾಣೆ ರಸ್ತೆ, ತೇರುಬೀದಿ, ಜೈನ್ ಮಾರ್ಕೆಟ್ ಮೂಲಕ ಹೆಚ್.ಆರ್.ಗವಿಯಪ್ಪ ವೃತ್ತದಿಂದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದವರೆಗೆ ಸಾಗಿಬಂದಿತು.

ಮೇ 16, 17ರಂದು ಕನಕಗಿರಿ ಉತ್ಸವ ಉತ್ಸವಕ್ಕೆ ಅಗತ್ಯ ಸಿದ್ಧತೆಯಾಗಲಿ: ಸಚಿವ ತಂಗಡಗಿ



ಕೊಪ್ಪಳ ,ಏ.23-

ನಡೆಯುತ್ತೋ ಇಲ್ಲವೋ ಎಂಬ ಅನುಮಾನಕ್ಕೆ ತೆರೆ ಬಿದ್ದಿದ್ದು, ಕನಕಗಿರಿ ಉತ್ಸವ-2026ನ್ನು ಮೇ 16 ಮತ್ತು 17ರಂದು ನಡೆಸಲು ತೀರ್ಮಾನಿಸಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ಎಸ್.ತಂಗಡಗಿ ಅವರ ಅಧ್ಯಕ್ಷತೆಯಲ್ಲಿ ಶ್ರೀ ಕನಕಾಚಲಪತಿ ದೇವಸ್ಥಾನದ ಆವರಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಯಿತು. ಉತ್ಸವದ ದಿನಾಂಕ ಕುರಿತು ಸಾರ್ವಜನಿಕರಿಂದ ಸಲಹೆಗಳನ್ನು ಪಡೆದ ಸಚಿವರು, ಸ್ಥಳೀಯ ಜಾತ್ರೆಯೊಂದಿಗೆ ಉತ್ಸವ ಆಯೋಜಿಸಿದರೆ ಜನತೆಗೆ ಅನುಕೂಲವಾಗುತ್ತದೆ ಎಂದು ತಿಳಿಸಿದರು. ಈ ಹಿನ್ನೆಲೆಯಲ್ಲಿ ಮೇ 9 ಮತ್ತು 10ರ ಬದಲಿಗೆ ಮೇ 16 ಮತ್ತು 17ರಂದು ಉತ್ಸವ ನಡೆಸಲು ನಿರ್ಧರಿಸಲಾಯಿತು. ಈ ಬಾರಿಯ ಉತ್ಸವವನ್ನು ಇನ್ನಷ್ಟು ಅದ್ದೂರಿಯಾಗಿ ಆಚರಿಸಲು ವಿವಿಧ ಕಾರ್ಯಕ್ರಮಗಳನ್ನು ರೂಪಿಸಲಾಗಿದ್ದು, ಎರಡು ದಿನಗಳ ಕಾಲ ಹೆಲಿಕ್ಯಾಪ್ಟರ್ ರೈಡ್ ವ್ಯವಸ್ಥೆ ಮಾಡಲಾಗುವುದು. ಮೇ 14 ಮತ್ತು 15ರಂದು ಕ್ರೀಡಾಕೂಟ ಆಯೋಜನೆ ಮಾಡುವುದಾಗಿ ತಿಳಿಸಿದರು.

ಬೇಸಿಗೆ ಹಿನ್ನೆಲೆಯಲ್ಲಿ ಮೆರವಣಿಗೆಗಳನ್ನು ಬೆಳಗಿನ ಅವಧಿಯಲ್ಲಿ ನಡೆಸುವಂತೆ ಸೂಚನೆ ನೀಡಲಾಗಿದ್ದು, ಕವಿಗೋಷ್ಠಿ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಎರಡೂ ದಿನ ನಡೆಯಲಿವೆ. ಕನಕಗಿರಿಯಲ್ಲಿ ಮೈಸೂರು ಮಾದರಿಯಲ್ಲಿ ಲೈಟಿಂಗ್ ವ್ಯವಸ್ಥೆ ಕಲ್ಪಿಸುವುದಾಗಿ ತಿಳಿಸಲಾಗಿದೆ.

ಸಾರ್ವಜನಿಕರ ಸಲಹೆಯಂತೆ ಕುಡಿಯುವ ನೀರಿನ ವ್ಯವಸ್ಥೆ, ದೇವಾಲಯ ಹಾಗೂ ಕೋಟೆ ದುರಸ್ತಿ ಸೇರಿದಂತೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗುವುದು. ಉತ್ಸವದ ಯಶಸ್ಸಿಗಾಗಿ 18 ಸಮಿತಿಗಳನ್ನು ರಚಿಸಿ, ಕಾರ್ಯ ಹಂಚಿಕೆ ಮಾಡಲಾಗಿದೆ.

ಸಂಜೆ ವೇಳೆಯಲ್ಲಿ ಕೊಪ್ಪಳದಿಂದ ಕನಕಗಿರಿಗೆ ವಿಶೇಷ ಬಸ್ ವ್ಯವಸ್ಥೆ ಕಲ್ಪಿಸಲು ಕೆಎಸ್‌ಆರ್‌ಟಿಸಿ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಮಾತನಾಡಿ, ಉತ್ಸವಕ್ಕಾಗಿ ಸುಮಾರು 6 ಕೋಟಿ ರೂ. ಅನುದಾನ ನಿಗದಿಪಡಿಸಲಾಗಿದ್ದು, ಎರಡು ವೇದಿಕೆಗಳ ನಿರ್ಮಾಣ ಹಾಗೂ ಕಲಾವಿದರ ಆಹ್ವಾನಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಉತ್ಸವದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸಚಿವರು ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ದಿ, ಪಟ್ಟಣ ಪಂಚಾಯತ್ ಅಧ್ಯಕ್ಷರಾದ ತನುಶ್ರೀ ರಾಮಚಂದ್ರ, ಉಪಾಧ್ಯಕ್ಷರಾದ ಕಂಠೀರಾವ್, ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಸಹಾಯಕ ಆಯುಕ್ತರಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಡಿವೈಎಸ್ಪಿ ನ್ಯಾಮಗೌಡರ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಏ. 24 ರಂದು ಕೊಪ್ಪಳದಲ್ಲಿ ರಾಜ್ ಸಂಭ್ರಮ-2026

ಕೊಪ್ಪಳ ಏ.23-

ಜಿಲ್ಲಾಡಳಿತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕೊಪ್ಪಳ ಹಾಗೂ ಕರ್ನಾಟಕ ಚಲನಚಿತ್ರ ಅಕಾಡೆಮಿ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಡಾ. ರಾಜ್‌ಕುಮಾರ ಅವರ 97ನೇ ಜನ್ಮ ದಿನಾಚರಣೆ ಪ್ರಯುಕ್ತ ರಾಜ್ ಸಂಭ್ರಮ-2026 ಡಾ. ರಾಜ್‌ಕುರ್ಮಾ ರವರ ಚಲನಚಿತ್ರ ಗೀತೆಗಳ ಗಾಯನ ಮತ್ತು ಡಾ. ರಾಜ್‌ಕುಮಾರ್ ಅವರ ಸಿನೆಮಾಗಳ ಡೈಲಾಗ್ (ಮಿಮಿಕ್ರಿ) ಕಾರ್ಯಕ್ರಮವನ್ನು ಏಪ್ರಿಲ್ 24 ರಂದು ಸಂಜೆ 5.30 ಗಂಟೆಗೆ ನಗರದ ಸಾಹಿತ್ಯ ಭವನದಲ್ಲಿ ಆಯೋಜಿಸಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ತಂಗಡಗಿ ಶಿವರಾಜ ಸಂಗಪ್ಪ ಅವರು ಕಾರ್ಯಕ್ರಮ ಉದ್ಘಾಟಿಸುವರು. ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ಶಾಸಕರಾದ ದೊಡ್ಡನಗೌಡ ಹನುಮಗೌಡ ಪಾಟೀಲ,ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ಶಾಸಕರಾದ ಬಸವರಾಜ ರಾಯರಡ್ಡಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ, ಹಿಟ್ನಾಳ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ, ಗಂಗಾವತಿ ಶಾಸಕರಾದ ಜಿ.ಜನಾರ್ಧನ ರೆಡ್ಡಿ, ವಿಧಾನ ಪರಿಷತ್ ಸದಸ್ಯರುಗಳಾದ ಶರೀಲ್ ಜಿ.ನಮೋಶಿ, ಡಾ.ಚಂದ್ರಶೇಖರ ಬಿ.ಪಾಟೀಲ, ಶರಣಗೌಡ ಅನ್ನದಾನಗೌಡ ಪಾಟೀಲ ಬಯ್ಯಾಪೂರ ಹಾಗೂ ಹೇಮಲತಾ ನಾಯಕ, ಮುನಿರಾಬಾದ್ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ತುಂಗಭದ್ರಾ ಯೋಜನೆಯ ಅಧ್ಯಕ್ಷರಾದ ಹಸನಸಾಬ ನಬಿಸಾಬ ದೋಟಿಹಾಳ, ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪ್ರಸನ್ನ ವಿ. ಗಡಾದ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಅವರು ಆಗಮಿಸುವರು. ವಿಶೇಷ ಆಹ್ವಾನಿತರಾಗಿ ಬಾಗಲಕೋಟೆಯ ಕೃಷ್ಣ ಮೇಲ್ದಂಡೆ ಯೋಜನೆ ಹಾಗೂ ಭೂಸ್ವಾದೀನ ಪುನರ್ವಸತಿ ಮತ್ತು ಪುನರ್ ನಿರ್ಮಾಣ ಆಯುಕ್ತರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಕೆ.ಪಿ ಮೋಹನ್‌ರಾಜ್ ಅವರು ಆಗಮಿಸುವರು.

ಕಾರ್ಯಕ್ರಮದಲ್ಲಿ ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ.ರಾಮ್ ಎಲ್. ಅರಸಿದ್ದಿ, ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಹಾಗೂ ಕರ್ನಾಟಕ ಚಲನಚಿತ್ರ ಅಕಾಡೆಮಿ ಸದಸ್ಯರಾದ ಸಾವಿತ್ರಿ ಮುಜಮದಾರ ಅವರು ಪಾಲ್ಗೊಳ್ಳುವರು ಎಂದು ಕೊಪ್ಪಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕರಾದ ಗವಿಸಿದ್ದಪ್ಪ ಹೊಸಮನಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಕ್ತಸಿಕ್ತ ಶಾಲಾ ಬ್ಯಾಗ್‌ಗಳು, ಮಕ್ಕಳ ಭಾವಚಿತ್ರಗಳೊಂದಿಗೆ ಪಾಕಿಸ್ತಾನಕ್ಕೆ ಆಗಮಿಸಿರುವ ಇರಾನ್ ನಿಯೋಗ

ಅಮೆರಿಕ ಮತ್ತು ಇಸ್ರೇಲ್ ಜತೆಗಿನ ಯುದ್ಧಕ್ಕೆ ವಿರಾಮ ಹಾಡುವ ನಿಟ್ಟಿನಲ್ಲಿ ಶಾಂತಿ ಮಾತುಕತೆಗಾಗಿ ಪಾಕಿಸ್ತಾನಕ್ಕೆ ಆಗಮಿಸಿರುವ ಇರಾನ್ ನಿಯೋಗವು ಭಾವುಕ ದೃಶ್ಯಗಳಿಗೆ ಸಾಕ್ಷಿಯಾಗಿದೆ. ಇತ್ತೀಚೆಗೆ ಮಿನಾಬ್ ಶಾಲೆಯ ಮೇಲೆ ನಡೆದ ದಾಳಿಯಲ್ಲಿ ಹುತಾತ್ಮರಾದ ಮಕ್ಕಳ ಭಾವಚಿತ್ರಗಳು, ಅವರ ರಕ್ತಸಿಕ್ತ ಶಾಲಾ ಬ್ಯಾಗ್‌ಗಳು ಮತ್ತು ಗುಲಾಬಿ ಹೂವುಗಳನ್ನು ವಿಮಾನದ ಸೀಟುಗಳಲ್ಲಿ ಇಡುವ ಮೂಲಕ ಇರಾನ್ ತನ್ನ ಶೋಕ ಮತ್ತು ಆಕ್ರೋಶವನ್ನು ಜಗತ್ತಿನೆದುರು ತೆರೆದಿಟ್ಟಿದೆ ಎಂದು ಎಕನಾಮಿಕ್ಸ್ ಮಾಡಿದೆ.

ಇರಾನ್ ಸಂಸತ್ತಿನ ಸ್ಪೀಕರ್ ಎಂ.ಬಿ. ಗಾಲಿಬಾಫ್ ಅವರು ಈ ವಿಮಾನದ ದೃಶ್ಯಗಳನ್ನು ಹಂಚಿಕೊಂಡಿದ್ದು, ''ಈ ಮಕ್ಕಳ ಭಾವಚಿತ್ರಗಳು ಮತ್ತು ಬ್ಯಾಗ್‌ಗಳು ನನ್ನ ವಿಮಾನದ ಸಹಚರರು'' ಎಂದು ತಿಳಿಸಿದ್ದಾರೆ. ಅಮೆರಿಕ-ಇಸ್ರೇಲ್ ಮತ್ತು ಇರಾನ್ ಯುದ್ಧದ ಮೊದಲ ದಿನವೇ ಮಿನಾಬ್‌ನಲ್ಲಿರುವ ಶಜರೆಹ್ ತಯ್ಯೆಬೆಹ್ ಶಾಲೆಯ ಮೇಲೆ ಭಾರಿ ವಾಯುದಾಳಿ ನಡೆದಿತ್ತು. ಈ ದಾಳಿಯಲ್ಲಿ 175ಕ್ಕೂ ಹೆಚ್ಚು ಮಕ್ಕಳು ಮತ್ತು ಶಿಕ್ಷಕರು ಸಾವನ್ನಪ್ಪಿದ್ದಾರೆ ಎಂದು ತೆಹ್ರಾನ್ ಆರೋಪಿಸಿದೆ. ಈ ಘಟನೆಯ ನಂತರ ಇರಾನ್‌ನಾದ್ಯಂತ ಮಕ್ಕಳ ಶವಪೆಟ್ಟಿಗೆಗಳ ಮೇಲೆ ರಾಷ್ಟ್ರಧ್ವಜ ಹೊದಿಸಿ ಭಾವಪೂರ್ಣ ವಿದಾಯ ಹೇಳಲಾಗಿತ್ತು.

ಇನ್ನಷ್ಟು ವಿಶೇಷ ಲೇಖನಗಳಿಗಾಗಿ, ಇಲ್ಲಿ ಕ್ಲಿಕ್ ಮಾಡಿ

ಬಿಜೆಪಿಯಿಂದ ಭಯೋತ್ಪಾದನೆ ಮಟ್ಟ ಹಾಕುವ ಮಂತ್ರ; ಪುಲ್ವಾಮ, ಪಹಲ್ಗಾಮ್...

ಟ್ರಂಪ್ ಆಡಳಿತದಿಂದ ಅಮೆರಿಕ ಬಿಡಲು ಮುಂದಾದ ಶೇ. 40ರಷ್ಟು...

ಎಸ್‌ಎಸ್‌ಎಲ್‌ಸಿ ಫಲಿತಾಂಶ ಹೆಚ್ಚಳಕ್ಕೆ ಇಲಾಖೆ...

ಶಾಲೆಯ ಮೇಲಿನ ಈ ಕ್ರೂರ ದಾಳಿಯನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇರಾನ್ ಕಡೆಗೇ ತಿರುಗಿಸಿದ್ದಾರೆ. ''ಇದನ್ನು ಇರಾನ್ ಮಾಡಿದೆ ಎಂದು ನಾವು ಭಾವಿಸುತ್ತೇವೆ. ಅವರ ಶಸ್ತ್ರಾಸ್ತ್ರಗಳಿಗೆ ನಿಖರ ಗುರಿ ಇಲ್ಲ. ಹೀಗೆ ಗುರಿ ತಪ್ಪಿ ಈ ಅನಾಹುತ ನಡೆದಿದೆ,'' ಎಂದು ಏರ್ ಫೋರ್ಸ್ ಒನ್ ವಿಮಾನದಲ್ಲಿ ಟ್ರಂಪ್ ಪತ್ರಕರ್ತರಿಗೆ ತಿಳಿಸಿದ್ದಾರೆ. ಇನ್ನೊಂದೆಡೆ, ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಕಚೇರಿಯ ವಕ್ತಾರೆ ರವೀನಾ ಶಮ್ದಾಸನಿ ಅವರು, ''ಯಾರು ಈ ದಾಳಿ ಮಾಡಿದ್ದಾರೋ ಅವರೇ ಇದರ ತನಿಖೆ ನಡೆಸಬೇಕು,'' ಎಂದು ಜಿನೇವಾದಲ್ಲಿ ಆಗ್ರಹಿಸಿದ್ದಾರೆ.

ಜಗತ್ತಿನ ಇಂಧನ ಮಾರುಕಟ್ಟೆಯ ಮೇಲೆ ಭಾರಿ ಪರಿಣಾಮ ಬೀರುತ್ತಿರುವ ಈ ಯುದ್ಧಕ್ಕೆ ಅಂತ್ಯ ಹಾಡಲು, ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರ ಮಧ್ಯಸ್ಥಿಕೆಯಲ್ಲಿ ಎರಡು ವಾರಗಳ ಯುದ್ಧ ವಿರಾಮ ಘೋಷಿಸಲಾಗಿದೆ. ಅದರ ಭಾಗವಾಗಿ ಎಂ.ಬಿ. ಗಾಲಿಬಾಫ್ ಮತ್ತು ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ನೇತೃತ್ವದ ನಿಯೋಗ ಶನಿವಾರ ಮುಂಜಾನೆ ಇಸ್ಲಾಮಾಬಾದ್ ತಲುಪಿದೆ.

ಬೇಸಿಗೆಯಲ್ಲಿ ಆರೋಗ್ಯದ ರಕ್ಷಣೆ: ಸಾರ್ವಜನಿಕರಿಗೆ ಆರೋಗ್ಯ ಇಲಾಖೆಯ ಪ್ರಮುಖ ಸಲಹೆ

ಕೊಪ್ಪಳ ಏ.23-

ಕೊಪ್ಪಳ ಜಿಲ್ಲೆಯಾದ್ಯಂತ ಪ್ರಸ್ತುತ ದಿನಗಳಲ್ಲಿ ಬಿಸಿಲಿನ ಪ್ರಕರತೆ ಮತ್ತು ತೀವ್ರತೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು, ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಹಾಗೂ ವಯೋವೃದ್ದರು ಆರೋಗ್ಯದ ಬಗ್ಗೆ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸಲು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಸಾರ್ವಜನಿಕರಿಗೆ ಆರೋಗ್ಯ ಕುರಿತು ಪ್ರಮುಖ ಸಲಹೆಗಳನ್ನು ನೀಡಲಾಗಿದೆ.

ಸಾರ್ವಜನಿಕರು ಬೇಸಿಗೆ ಸಮಯದಲ್ಲಿ ಆರೋಗ್ಯವನ್ನು ಕಾಪಾಡಿಕೊಳ್ಳಲು ಪ್ರಮುಖ ಆರೋಗ್ಯ ಸಲಹೆಗಳನ್ನು ಪಾಲಿಸುವುದು ಅತ್ಯವಶ್ಯಕವಾಗಿದ್ದು, ಅವುಗಳು ಇಂತಿವೆ.

ನೀರಿನ ಸೇವನೆ: ಈ ಸಮಯದಲ್ಲಿ ಹೆಚ್ಚು ನೀರಿನ ಸೇವನೆ ಮಾಡಬೇಕು. ಬಾಯಾರಿಕೆ ಇಲ್ಲದಿದ್ದರೂ ಸಹ ದಿನವಿಡೀ ಸಾಕಷ್ಟು ನೀರು ಕುಡಿಯುತ್ತಿರಬೇಕು.

ತಂಪು ಪಾನೀಯಗಳ ಆಯ್ಕೆ: ಬೇಸಿಗೆ ಸಮಯದಲ್ಲಿ ನಿಂಬೆ ನೀರು, ಮಜ್ಜಿಗೆ, ಎಳೆನೀರು ಮತ್ತು ಮನೆಯಲ್ಲಿ ತಯಾರಿಸಿದ ಪಾನೀಯಗಳನ್ನು ಹೆಚ್ಚಾಗಿ ಬಳಸುವುದು ಸೂಕ್ತವಾಗಿದೆ.

ಆಹಾರ ಕ್ರಮ: ಸೌತೆಕಾಯಿ, ಕಲ್ಲಂಗಡಿ, ಕಿತ್ತಳೆ ಹಾಗೂ ದ್ರಾಕ್ಷಿಯಂತಹ ನೀರಿನ ಅಂಶ ಹೆಚ್ಚಿರುವ ಹಣ್ಣು- ತರಕಾರಿಗಳನ್ನು ಹೆಚ್ಚು ಸೇವಿಸಬೇಕು.

ಬಟ್ಟೆ ಧರಿಸುವುದು: ಹಗುರವಾದ, ತಿಳಿ ಬಣ್ಣದ ಸಡಿಲವಾದ ಹತ್ತಿ ಬಟ್ಟೆಗಳನ್ನು ಧರಿಸುವುದು ಸೂಕ್ತ.

ಹೊರಹೋಗುವಾಗ ಜಾಗ್ರತೆ: ಮಧ್ಯಾಹ್ನ 12 ರಿಂದ 3 ಗಂಟೆಯವರೆಗೆ ಬಿಸಿಲಿನಲ್ಲಿ ಛತ್ರಿ, ಟೋಪಿ, ಕಪ್ಪು ಕನ್ನಡಕ ಹಾಗೂ ಚಪ್ಪಲಿಗಳನ್ನು ಬಳಸಬೇಕು.

ಪ್ರಥಮ ಚಿಕಿತ್ಸೆ : ಬಿಸಿಲಿನಿಂದ ಯಾರಾದರೂ ಪ್ರಜ್ಞೆ ತಪ್ಪಿದರೆ, ತಕ್ಷಣ ಅವರಿಗೆ ತಂಪಾದ ಸ್ಥಳಕ್ಕೆ ಸ್ಥಳಾಂತರಿಸಬೇಕು ಮತ್ತು ಒದ್ದೆ ಬಟ್ಟೆಯಿಂದ ಅವರ ಮೈ ಒರೆಸಬೇಕು ಹಾಗೂ ವೈದ್ಯರನ್ನು ಸಂಪರ್ಕಿಬೇಕು.

ಸಭೆ-ಸಮಾರಂಭ: ಹೊರಾಂಗಣ ಕಾರ್ಯಕ್ರಮಗಳನ್ನು ಸಾಧ್ಯವಾದಷ್ಟು ಬೆಳಗ್ಗೆ ಅಥವಾ ಸಂಜೆ ಆಯೋಜಿಸಿ, ಜನರಿಗೆ ನೆರಳು ಮತ್ತು ನೀರಿನ ವ್ಯವಸ್ಥೆ ಕಲ್ಪಿಸಬೇಕು.

ಪ್ರಾಣಿಗಳ ರಕ್ಷಣೆ: ಬೇಸಿಗೆಯಲ್ಲಿ ಸಾಕು ಪ್ರಾಣಿಗಳ ಮೇಲೆಯು ನಿಗಾ ವಹಿಸುವುದು ಅತ್ಯವಶ್ಯಕವಾಗಿದ್ದು, ಅವುಗಳನ್ನು ನೆರಳಿನಲ್ಲಿರಿಸಿ. ಪ್ರಾಣಿಗಳಿಗೆ ಕುಡಿಯಲು ಸಾಕಷ್ಟು ನೀರು ಒದಗಿಸಬೇಕು.

ವಾಹನಗಳ ಜಾಗ್ರತೆ: ನಿಲ್ಲಿಸಿದ ವಾಹನಗಳಲ್ಲಿ ಮಕ್ಕಳನ್ನು ಅಥವಾ ಸಾಕು ಪ್ರಾಣಿಗಳನ್ನು ಒಬ್ಬರೇ ಬಿಟ್ಟು ಹೋಗಬೇಡಿ.

ತಪ್ಪಿಸಬೇಕಾದವು: ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಅತಿಯಾದ ಚಹಾ, ಕಾಫಿ ಮತ್ತು ಕಾರ್ಬೋನೇಟೆಡ್ ತಂಪು ಪಾನೀಯಗಳನ್ನು ಸೇವಿಸಬೇಡಿ.

ವಿಶೇಷವಾಗಿ ಕೆರೆ, ಬಾವಿ ಅಥವಾ ಕಾಲುವೆಗಳ ಹತ್ತಿರ ಮಕ್ಕಳು ಹೋಗದಂತೆ ನೋಡಿಕಳ್ಳಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಟಿ. ಲಿಂಗರಾಜು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೊದಲನೇ ಪುಟದಿಂದ

ಎಸ್‌ಎಸ್‌ಎಲ್‌ಸಿ ಫಲಿತಾಂಶ:ರಾಜ್ಯಕ್ಕೆ ಟಾಪರ್ ಆದ ವಿದ್ಯಾರ್ಥಿಗಳು

ಪ್ರೀತಮ್ ಬಿದ್ಕಲ್ಕಟ್ಟೆ ನಿವಾಸಿ ಗಣಪತಿ ಪೂಜಾರಿ-ನಾಗರತ್ನಾ ದಂಪತಿಯ ಇಬ್ಬರು ಮಕ್ಕಳ ಪೈಕಿ ಹಿರಿಯ ಪುತ್ರ. ತಂದೆ ಗಣಪತಿಯವರು ಶ್ರೀ ಲಕ್ಷ್ಮೀ ಎಕ್ಸ್ ಪ್ರೆಸ್ ಖಾಸಗಿ ಬಸ್‌ನಲ್ಲಿ ಕಂಡಕ್ಟರ್. ತಾಯಿ ನಾಗರತ್ನಾ ಗೃಹಿಣಿ. ಎಲ್.ಕೆ.ಜಿ.ಯಿಂದಲೂ ಈತ ಮದರ್ ಥೆರೆಸಾ ಸಂಸ್ಥೆಯಲ್ಲಿ ಕಲಿತಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿದ ಸಾಧಕ ವಿದ್ಯಾರ್ಥಿ ಪ್ರೀತಮ್ ಜಿ.ಪೂಜಾರಿ, ಅಂದಿನ ಪಾಠವನ್ನು ಅಂದೇ ಕಣ್ಣುಹಾಯಿಸುತ್ತಿದ್ದೆ. ಪಠ್ಯವನ್ನು ಓದಿ ಮುಗಿಸಲು ತಿಂಗಳ ಗುರಿಯನ್ನು ಇಟ್ಟುಕೊಂಡಿದ್ದೆ. ಪೋಷಕರು ಹಾಗೂ ವಿದ್ಯಾಸಂಸ್ಥೆಯವರ ಪ್ರೋತ್ಸಾಹ, ಮಾರ್ಗದರ್ಶನ ಸಾಧನೆಗೆ ಪ್ರೇರಣೆ. ಮುಂದೆ ವಿಜ್ಞಾನ ವಿಭಾಗದಲ್ಲಿ ಪಿಸಿಎಂಸಿಎಸ್ ಓದಿ ಜೆಇಇ ಪರೀಕ್ಷೆ ಬರೆಯುವ ಇಂಗಿತ ವ್ಯಕ್ತಪಡಿಸಿದ್ದಾರೆ.

ಶಂಕರನಾರಾಯಣ ಮದರ್ ಥೆರೆಸಾ ಮೆಮೋರಿಯಲ್ ಶಾಲೆಯ ಸಂಸ್ಥಾಪಕರಾದ ಶಮಿತಾ ರಾವ್ ಬಲ್ಮತ, ರೇನಿಟಾ ಲೋಬೋ ಮಾತನಾಡಿ, ವಿದ್ಯಾರ್ಥಿ ಪ್ರೀತಮ್ ಪೂಜಾರಿ ಸಾಧನೆ ಸಂತಸ ತಂದಿದೆ. ಆತ ವಿದ್ಯಾಭ್ಯಾಸ ಹಾಗೂ ಇತರ ಚಟುವಟಿಕೆಯಲ್ಲಿ ಸದಾ ಚುರುಕಾಗಿದ್ದ. 625 ಅಂಕ ಪಡೆಯುವ ನಿರೀಕ್ಷೆಯೂ ನಮಗೆ ಇತ್ತು. ಆತನ ಪರಿಶ್ರಮದ ಜೊತೆಗೆ ಗುರುಹಿರಿಯರ ಜೊತೆ ವಿನಮ್ರತೆ ಹೊಂದಿದ್ದ. ಈ ಬಾರಿ ರಾಜ್ಯಮಟ್ಟದ ಕ್ವಿಜ್‌ನಲ್ಲಿ ಎರಡನೇ ಸ್ಥಾನಿಯಾಗಿದ್ದ ಎಂದು ಪ್ರತಿಕ್ರಿಯೆ ನೀಡಿದ್ದಾರೆ.

ಕಾಫಿನಾಡಿನ ಬೃಂದಾ ರಾಜ್ಯಕ್ಕೆ ಫಸ್ಟ್: ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಇಲ್ಲಿನ ಸೆಂಟ್ ಮೇರಿಸ್ ಶಾಲೆಯ ವಿದ್ಯಾರ್ಥಿನಿಯಾಗಿರುವ ಬೃಂದಾ 625 ಅಂಕಗಳಿಗೆ 625 ಅಂಕಗಳನ್ನು ಪಡೆದು ರಾಜ್ಯಕ್ಕೆ ಅಗ್ರಸ್ಥಾನ ಪಡೆದಿದ್ದಾರೆ. ಮೊದಲಿನಿಂದಲೂ ಓದಿನ ಬಗ್ಗೆ ಅಪಾರ ಆಸಕ್ತಿ ಹೊಂದಿರುವ ಅವರು, ಶಿಕ್ಷಕರ ಮಾರ್ಗದರ್ಶನ ಹಾಗೂ ಪೋಷಕರ ಬೆಂಬಲದೊಂದಿಗೆ ಈ ಅಸಾಧಾರಣ ಗುರಿ ಸಾಧಿಸಿದ್ದಾರೆ. ಫಲಿತಾಂಶ ಪ್ರಕಟವಾದ ತಕ್ಷಣವೇ ಸೆಂಟ್ ಮೇರಿಸ್ ಶಾಲೆಯಲ್ಲಿ ಸಂಭ್ರಮದ ವಾತಾವರಣ ನಿರ್ಮಾಣವಾಗಿದೆ.

ಅಲ್ಲದೆ, ಸೆಂಟ್ ಮೇರಿಸ್ ಶಾಲೆಯ ನೂರಕ್ಕೆ ನೂರರಷ್ಟು ವಿದ್ಯಾರ್ಥಿಗಳು ತೇರ್ಗಡೆಯಾಗಿ ಸಾಧನೆ ಮೆರೆದಿದ್ದಾರೆ. ಪ್ರತಿಯೊಬ್ಬ ವಿದ್ಯಾರ್ಥಿಗಳು ಸಂಭ್ರಮದ ಅಲೆಯಲ್ಲಿ ತೇಲುತ್ತಿದ್ದು, ಶಿಕ್ಷಕರು ಹಾಗೂ ಪೋಷಕರು ಮಕ್ಕಳಿಗೆ ಸಿಹಿ ತಿನ್ನಿಸಿ ಸಂಭ್ರಮಿಸಿದರು.

ಮುದ್ದೇಬಿಹಾಳದ ಸೌಜನ್ಯಾ ಟಾಪರ್: ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ ಆಕ್ಸ್ ಫರ್ಡ್ ಶಾಲೆಯ ವಿದ್ಯಾರ್ಥಿನಿ ಸೌಜನ್ಯಾ ಬಸವರಾಜ್ ಕಂದಕೂರ ಕೂಡ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ರಾಜ್ಯಕ್ಕೆ ಟಾಪರ್ ಆಗಿದ್ದಾರೆ. ವಿದ್ಯಾರ್ಥಿನಿ ಇಂಗ್ಲಿಷ್ ಮಾಧ್ಯಮದಲ್ಲಿ ಸಾಧನೆ ಮಾಡಿದ್ದಾರೆ.

ವಿದ್ಯಾರ್ಥಿನಿಯ ಸಾಧನೆಗೆ ಶಾಲಾ ಆಡಳಿತ ಮಂಡಳಿಯು ಮೆಚ್ಚುಗೆ ವ್ಯಕ್ತಪಡಿಸಿದೆ. ಮುಖ್ಯೋಪಾಧ್ಯಾಯರು, ಶಿಕ್ಷಕ ವರ್ಗ ಹಾಗೂ ಕುಟುಂಬದಲ್ಲಿ ಸಂತಸ ಮನೆ ಮಾಡಿದೆ.

ಭಗೀರಥ ಮಹರ್ಷಿಯ ಆದರ್ಶಗಳನ್ನು ಮೈಗೂಡಿಸಿಕೊಳ್ಳಿ

ಮಾತನಾಡಿ, ಶ್ರೀ ಭಗೀರಥ ಜಯಂತಿ ಕರ್ನಾಟಕದಲ್ಲಿ ಅತ್ಯಂತ ದೊಡ್ಡ ಪ್ರಮಾಣದಲ್ಲಿ ಜಯಂತಿ ರಾಯಚೂರಿನಲ್ಲಿ ಆಚರಣೆ ಮಾಡಲಾಗುತ್ತಿದೆ. ಭಾರತದ ಇತಿಹಾಸದಲ್ಲಿ ಬಹುಸಂಖ್ಯೆ ಜನ ಸಂಖ್ಯೆಕ್ಕಿತ ಕಡಿಮೆ ಜನ ಸಂಖ್ಯೆ ಇರುವವರು ಸಾಧನೆ ಮಾಡಿದ್ದಾರೆ. ಜಯಂತಿ ಕೇವಲ ಒಂದು ದಿನಕ್ಕೆ ಸೀಮಿತಗೊಳ್ಳದೆ. ವರ್ಷವಿಡೀ ಅವರ ತತ್ವ, ಆಚಾರ ವಿಚಾರಗಳನ್ನು ಅಳವಡಿಸಿಕೊಳ್ಳಬೇಕು ಎಂದರು.

ಈಶ್ವರಿ ವಿಶ್ವವಿದ್ಯಾಲಯದ ಜಿಲ್ಲಾ ಸಂಚಾಲಕರಾದ ಸ್ಮಿತ್ ಅಮ್ಮನವರು ಮಾತನಾಡಿ, ಜೀವನದಲ್ಲಿ ಏನನ್ನಾದರೂ ಸಾಧಿಸಲು ಮಹರ್ಷಿ ಭಗೀರಥರಂತಹ ಪ್ರಯತ್ನ ಅಗತ್ಯವಿದೆ. ಭಗೀರಥರು ತಪಸ್ಸು ಮಾಡಿ ಗಂಗೆಯನ್ನು ಭೂಮಿಗೆ ತಂದ ಮಹಾಪುರುಷ. ಅವರ ಸಾಧನೆ, ಜೀವನಗಾಥೆಯನ್ನು ಪ್ರತಿಯೊಬ್ಬರೂ ಅರಿತು ತಮ್ಮ ಜೀವನದಲ್ಲಿ ಅವರ ಛಲ ಆದರ್ಶಗಳನ್ನು ರೂಢಿಸಿಕೊಳ್ಳಬೇಕು. ರಾಯಚೂರು ನಗರವನ್ನು ಪ್ಲಾಸ್ಟಿಕ್ ಮುಕ್ತ ನಗರವಾಗಿ ಮಾಡಲು ಪ್ರತಿಯೊಬ್ಬರೂ ಶ್ರಮಿಸಬೇಕು ಎಂದರು.

ಬಾಗಲಕೋಟೆಯ ಉಪನ್ಯಾಸಕರು ಹಾಗೂ ಯೋಗ ಶಿಕ್ಷಕರಾದ ರಾಘವೇಂದ್ರ ನೀಲನ್ನವರ ಅವರು ಶ್ರೀ ಭಗೀರಥ ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ: ಶ್ರೀ ಭಗೀರಥ ಜಯಂತಿ ಅಂಗವಾಗಿ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಾದ ರೇಖಾ, ಕೃತಿಕಾ, ತ್ರಿವೇಣಿ, ಅಂಜಲಿ, ಶ್ರೀನಿವಾಸ್ ಹಾಗೂ ಪವಿತ್ರ ಎಂಬುವರಿಗೆ ವಿವಿಧ ಗಣ್ಯರಿಂದ ಸನ್ಮಾನಿಸಿ ಗೌರವಿಸಲಾಯಿತು.

ವಿವಿಧ ಗಣ್ಯರಿಂದ ಮಾಲಾರ್ಪಣೆ: ಶ್ರೀ ಭಗೀರಥ ಜಯಂತಿ ಅಂಗವಾಗಿ ನಗರದ ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದ ಆವರಣದಲ್ಲಿ ರಾಯಚೂರು ನಗರ ಕ್ಷೇತ್ರದ ಶಾಸಕ ಡಾ.ಶಿವರಾಜ ಎಸ್.ಪಾಟೀಲ್, ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್, ಕೃಷಿ ಮಾರುಕಟ್ಟೆ ಅಧ್ಯಕ್ಷ ಮಲ್ಲಿಕಾರ್ಜುನಗೌಡ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್ ಅವರು ಸೇರಿದಂತೆ ವಿವಿಧ ಗಣ್ಯರಿಂದ ಮಾಲಾರ್ಪಣೆ ಮಾಡಿ, ಗೌರವ ಸಲ್ಲಿಸಲಾಯಿತು. ನಂತರ ನಗರದ ಗೀತಾಮಂದಿರ, ಸದರ ಬಜಾರ, ಸೂಪರ್ ಮಾರ್ಕೆಟ್, ಅಂಬೇಡ್ಕರ ಸರ್ಕಲ್ ಮಾರ್ಗವಾಗಿ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮದಿರಕ್ಕೆ ಮೆರವಣಿಯು ಬಂದು ಸೇರಿತ್ತು.

ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತ ಶರಣಪ್ಪ, ಮುಖಂಡರಾದ ಕೆ.ಶಾಂತಪ್ಪ, ಚನ್ನಪ್ಪ ಗೌಡ, ಸಮಾಜದ ಮುಖಂಡರಾದ ಪಾಗುಂಟಪ್ಪ ಮಿರ್ಜಾಪುರ, ದೇವೇಂದ್ರಪ್ಪ, ವೆಂಕೋಬ, ಚಂದ್ರಶೇಖರ, ನಾಗರಾಜ್, ಸುರೇಖಾ, ಶ್ರೀನಿವಾಸ್, ನಿವೃತ್ತ ಡಿವೈಎಸ್ಪಿ ರಮೇಶ್ ಮೇಟಿ, ಸುಭಾಷ್ ಚಂದ್ರ, ನರಸಿಂಹಲು, ವರಮೂನಿ, ಅಮರೇಶ ಸಾಗರ ಸೇರಿದಂತೆ ಇತರರು ಇದ್ದರು.

ನಗರದಲ್ಲಿ ತಾಪಮಾನ ಏರಿಕೆ: ಸಾರ್ವಜನಿಕರ ರಕ್ಷಣೆಗಾಗಿ ಶಾಶ್ವತ ನೆರಳು ಹಾಗೂ ನೀರಿನ ವ್ಯವಸ್ಥೆಗೆ ಪ್ರಗತಿಪರ ಸಂಘಟನೆಗಳ ಒತ್ತಾಯ

ಮೂಲಕ ನಿಯಮಿತವಾಗಿ ನೀರು ಸಿಂಪಡಿಸುವ ವ್ಯವಸ್ಥೆಯನ್ನು ಜಾರಿಗೊಳಿಸುವಂತೆ ವಿನಂತಿಸಲಾಯಿತು.

ಇದೇ ಸಂದರ್ಭದಲ್ಲಿ ಸಂಘಟನೆಗಳು ಗಂಭೀರ ಎಚ್ಚರಿಕೆಯನ್ನು ನೀಡಿದ್ದು, ಈ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಲು ಮಹಾನಗರ ಪಾಲಿಕೆಗೆ ನಾಲ್ಕು ದಿನಗಳ ಅವಧಿಯನ್ನು ನೀಡಲಾಗಿದೆ. ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳ್ಳದಿದ್ದಲ್ಲಿ, ಬಸವೇಶ್ವರ ವೃತ್ತದಲ್ಲಿ ರಸ್ತೆ ರೋಕು ಹೋರಾಟವನ್ನು ನಡೆಸಲಾಗುವುದು ಎಂದು ಕಠಿಣವಾಗಿ ಆಗ್ರಹಿಸಲಾಯಿತು.

ಸಂಘಟನೆಗಳು ಸ್ಪಷ್ಟಪಡಿಸಿದಂತೆ, ಇಂತಹ ಕ್ರಮಗಳು ತೀವ್ರ ಬಿಸಿಲಿನ ಸಮಯದಲ್ಲಿ ಸಾರ್ವಜನಿಕರ ಆರೋಗ್ಯವನ್ನು ಕಾಪಾಡಲು ಹಾಗೂ ಉಷ್ಣತೆಯಿಂದ ಉಂಟಾಗುವ ಸಮಸ್ಯೆಗಳನ್ನು ಕಡಿಮೆ ಮಾಡಲು ಬಹಳ ಉಪಕಾರಿಯಾಗಲಿವೆ.

ಈ ಸಂದರ್ಭದಲ್ಲಿ ಅಂಬೇಡ್ಕರ್ ಸೇನೆಯ ಜಿಲ್ಲಾಧ್ಯಕ್ಷರಾದ ವಿಶ್ವನಾಥ್ ಪಟ್ಟಿ, ಸಮಾಜಸೇವಕರಾದ ಅಂಬಾಜಿ ಮೈದರ್ಕರ್, ರಾಜೇಶ್ ಕ್ರಾಂತಿ, ಕುಮಾರಸ್ವಾಮಿ, ಅಮರಯ್ಯಸ್ವಾಮಿ, ಬಂದೆ ನವಾಜ್, ನರಸಿಂಹಲು ಮೇಘ, ಗಂಗಾಧರ್ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ಖರ್ಗೆ ಅವರ ವಿವಾದಾತ್ಮಕ ಹೇಳಿಕೆ ಖಂಡಿಸಿ ಬಿಜೆಪಿ ಪ್ರತಿಭಟನೆ

ಮಾಡಲಾಗುತ್ತಿರುವ ತಪ್ಪು ಪ್ರಚಾರ ಎಂದು ಹೇಳಿದರು. ಪ್ರತಿಭಟನೆ ಹಿನ್ನೆಲೆಯಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸರು ಸ್ಥಳದಲ್ಲಿ ಬಿಗಿ ಬಂದೋಬಸ್ತ್ ಏರ್ಪಡಿಸಿದ್ದರು. ಈ ಪ್ರತಿಭಟನೆಯಲ್ಲಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

18 ವರ್ಷದ ಯುವಕ ಸೇರಿ 800ಕ್ಕೂ ಹೆಚ್ಚು ಜೀವಗಳ ಬೆಲೆಗೂ ಜಾಗೃತಿಯಾಗದ ವ್ಯವಸ್ಥೆ''

ಸ್ಪಾಟ್‌ಗಳಾಗಿ ಗುರುತಿಸಲ್ಪಟ್ಟಿವೆ. ಮಳೆಗಾಲದಲ್ಲಿ ರಸ್ತೆ ಮೇಲ್ಮೈ ಹಾನಿಗೊಳಗಾಗುವುದು ಹಾಗೂ ನೀರು ನಿಲ್ಲುವ ಸಮಸ್ಯೆಯೂ ಅಪಘಾತಗಳಿಗೆ ಕಾರಣವಾಗುತ್ತಿದೆ ಎಂಬುದು ಸ್ಥಳೀಯರ ಆರೋಪ.

ಈ ಕುರಿತು ಪ್ರತಿಕ್ರಿಯಿಸಿದ ಸಮಾಜ ಸೇವಕ ಹಾಗೂ ಬಿಜೆಪಿ ಮಾಜಿ ಜಿಲ್ಲಾ ಉಪಾಧ್ಯಕ್ಷ ಡಾ. ಬಾಬುರಾವ್,

'' ನವೋದಯ ವೈದ್ಯಕೀಯ ಶಿಕ್ಷಣ ಸಂಸ್ಥೆ ವೃತ್ತದಿಂದ ಶಕ್ತಿನಗರದವರೆಗೆ ಹೆದ್ದಾರಿ 167 ವಾಹನಗಳಿಂದ ತುಂಬಿಕೊಂಡಿದೆ. ಆದರೆ ಸುರಕ್ಷತಾ ಕ್ರಮಗಳ ಕೊರತೆಯಿಂದ ಇದು ನಿಜಕ್ಕೂ ಸಾವಿನ ಬಲೆಯಾಗಿದೆ. ತಕ್ಷಣವೇ ಈ ರಸ್ತೆಯನ್ನು ವಿಭಜಿತ ನಾಲ್ಕು ಪಥದ ಹೆದ್ದಾರಿಯಾಗಿ ಅಭಿವೃದ್ಧಿಪಡಿಸಬೇಕು,'' ಎಂದು ಒತ್ತಾಯಿಸಿದರು.

''ಮುನ್ನೆಚ್ಚರಿಕಾ ಫಲಕಗಳು, ವೇಗ ನಿಯಂತ್ರಣ ಸಾಧನಗಳು, ಸಿಸಿಟಿವಿ ನಿಗಾವ್ಯವಸ್ಥೆ, ರಸ್ತೆ ಗುರುತುಗಳ ಸ್ಪಷ್ಟತೆ ಹಾಗೂ ಪಾದಚಾರಿಗಳಿಗೆ ಸುರಕ್ಷಿತ ದಾಟಣೆ ವ್ಯವಸ್ಥೆ ಕಲ್ಪಿಸಬೇಕು. ಅಪಘಾತ ಪ್ರಮಾಣ ಕಡಿಮೆ ಮಾಡಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ತುರ್ತು ಕ್ರಮ ಕೈಗೊಳ್ಳಬೇಕು,'' ಎಂದು ಆಗ್ರಹಿಸಿದರು.

ವಿಶೇಷವಾಗಿ ನಗರ ಪ್ರದೇಶದಲ್ಲಿ ಭಾರೀ ವಾಹನ ಸಂಚಾರವನ್ನು ನಿಯಂತ್ರಿಸಲು ರಿಂಗ್ ರೋಡ್ ಅವಶ್ಯಕತೆ ತೀವ್ರವಾಗಿದ್ದು, ಇದರಿಂದ ನಗರ ಒಳಗಿನ ಒತ್ತಡ ಕಡಿಮೆಯಾಗುವ ಜೊತೆಗೆ ಹೆದ್ದಾರಿಯ ಅಪಘಾತ ಪ್ರಮಾಣ ಕಡಿಮೆಯಾಗಲಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಸಾವಿರಾರು ಕುಟುಂಬಗಳನ್ನು ದುಃಖದ ನೆರಳಿಗೆ ತಳ್ಳಿದರೂ ಕೂಡ ಇನ್ನೂ ಸಮರ್ಪಕ ಕ್ರಮ ಕೈಗೊಳ್ಳದಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ. ನಿರಂತರ ಅಪಘಾತಗಳು, ಯುವ ಜೀವಗಳ ನಾಶ ಮತ್ತು ಸುರಕ್ಷಾ ವ್ಯವಸ್ಥೆಗಳ ಕೊರತೆಇವೆಲ್ಲವು ಸೇರಿ ಹೆದ್ದಾರಿ 167 ಅನ್ನು ಜನರಿಗೆ ಭಯಾನಕ ಮಾರ್ಗವನ್ನಾಗಿ ಮಾಡಿವೆ.


ಇನ್ನಾದರೂ ಸಂಬಂಧಿತ ಅಧಿಕಾರಿಗಳು ಎಚ್ಚೆತ್ತುಕೊಂಡು ಪರಿಣಾಮಕಾರಿ ಕ್ರಮಗಳನ್ನು ಕೈಗೊಂಡು ಜನರ ಜೀವ ರಕ್ಷಣೆಗೈಯಬೇಕೆಂಬ ಒತ್ತಾಯ ಸಾರ್ವಜನಿಕ ವಲಯದಲ್ಲಿ ಗಟ್ಟಿಯಾಗುತ್ತಿದೆ.

ಸ್ಥಳೀಯರು ಮುಂದಿಟ್ಟಿರುವ ಪ್ರಮುಖ ಬೇಡಿಕೆಗಳು ಹೀಗಿವೆ:

ಹೆದ್ದಾರಿ ದೀಪಾಲಂಕಾರ ವ್ಯವಸ್ಥೆ ಸುಧಾರಣೆ, ಟ್ರಾಫಿಕ್ ನಿಯಂತ್ರಣಕ್ಕೆ ಹೆಚ್ಚುವರಿ ಪೊಲೀಸ್ ನಿಯೋಜನೆ, ಅಪಾಯಕಾರಿ ಸ್ಥಳಗಳಲ್ಲಿ ಸ್ಪೀಡ್ ಬ್ರೇಕರ್ ಹಾಗೂ ರಂಬಲ್ ಸ್ಟ್ರಿಪ್ ಅಳವಡಿಕೆ, ತುರ್ತು ವೈದ್ಯಕೀಯ ನೆರವು ಕೇಂದ್ರಗಳ ಸ್ಥಾಪನೆ ಸಿಸಿಟಿವಿ ಕ್ಯಾಮೆರಾ ವ್ಯವಸ್ಥೆ

ರಿಂಗ್ ರೋಡ್ ನಿರ್ಮಾಣ ಮಾಡಬೇಕೆಂದು ಜಿಲ್ಲಾಡಳಿತ ಹಾಗೂ ರಾಜಕಾರಣಿಗಳಿಗೆ ಅವರು ಒತ್ತಾಯಿಸಿದ್ದಾರೆ.

ಬಿಸಿಲ ಬೇಗೆಗೆ ಮಾವು ಬೆಳೆ ನಾಶ, ಬೆಲೆ ಕುಸಿತ, ಬೆಳೆಗಾರರಿಗೆ ನೆರವಾಗುವುದೇ ಸರ್ಕಾರ?



ತಾಪಮಾನದ ತೀವ್ರ ಏರಿಕೆ, ಅಕಾಲಿಕ ಮಳೆ ಮತ್ತು ಜೋನಿ ರೋಗದ ಕಾಟದಿಂದ ಮಾವಿನ ತೋಟಗಳು ತುತ್ತಾಗಿವೆ. ಇದು ಕೇವಲ ಬೆಳೆ ನಷ್ಟದ ಸಮಸ್ಯೆಯಲ್ಲ, ರೈತರ ಬದುಕಿನ ಪ್ರಶ್ನೆಯಾಗಿದೆ. ಈ ಸಂಕಷ್ಟವನ್ನು ಸಮರ್ಥವಾಗಿ ಎದುರಿಸಲು ವಿಜ್ಞಾನಾಧಾರಿತ ಕೃಷಿ ವಿಧಾನಗಳು, ಸರ್ಕಾರಿ ಬೆಂಬಲ ಮತ್ತು ರೈತರ ಜಾಗೃತಿ ಅಗತ್ಯವಾಗಿದೆ.

ತಾಪಮಾನದ ತೀವ್ರ ಏರಿಕೆ ಇತ್ತೀಚಿನ ವರ್ಷಗಳಲ್ಲಿ ಕೃಷಿ ಕ್ಷೇತ್ರಕ್ಕೆ ದೊಡ್ಡ ಸವಾಲಾಗಿ ಪರಿಣಮಿಸಿದೆ. ವಿಶೇಷವಾಗಿ ತೋಟಗಾರಿಕೆ ಬೆಳೆಗಳಲ್ಲಿ, ಅದರಲ್ಲೂ ಮಾವಿನ ತೋಟಗಳಲ್ಲಿ ಹವಾಮಾನ ವೈಪರೀತ್ಯದಿಂದ ಉಂಟಾಗಿರುವ ಪರಿಣಾಮ ಸ್ಪಷ್ಟವಾಗಿ ಗೋಚರಿಸುತ್ತಿದೆ. ಅಕಾಲಿಕ ಮಳೆ, ಬೇಸಿಗೆಯ ಉಷ್ಣತೆ ವಿಪರೀತವಾಗಿ ಏರುತ್ತಿರುವುದು, ಬಿಸಿಗಾಳಿಯ ಪ್ರಭಾವ ಹಾಗೂ ಜೋನಿ ರೋಗದ ಕಾಟ ಎಲ್ಲವೂ ಸೇರಿ ಮಾವು ಕಾಯಿಕಚ್ಚುವ ಮುನ್ನವೇ ಉದುರುವ ಘಟನೆಗಳು ಹೆಚ್ಚುತ್ತಿವೆ. ಇದರಿಂದಾಗಿ ಮಾವು ಬೆಳೆ ನಾಶವಾಗುತ್ತಿದ್ದು, ಹವಾಮಾನ ವೈಪರೀತ್ಯ ಬೆಳೆಗಾರರನ್ನು ಸಂಕಷ್ಟದ ಕೂಪಕ್ಕೆ ತಳ್ಳಿವೆ.

ಮಾವಿನ ಮರವು ಸಾಮಾನ್ಯವಾಗಿ ಬಿಸಿ ಹವಾಮಾನಕ್ಕೆ ಹೊಂದಿಕೊಳ್ಳುವ ಬೆಳೆ. ಆದರೆ, ತಾಪಮಾನವು 40 ಡಿಗ್ರಿ ಸೆಲ್ಸಿಯಸ್ ಮೀರಿದಾಗ ಅದರ ಸುಸ್ಥಿರ ಕೃಷಿಯ ಮೇಲೆ ದುಷ್ಪರಿಣಾಮ ಬೀರುತ್ತದೆ. ವಿಶೇಷವಾಗಿ ಹೂ ಬಿಟ್ಟ ನಂತರ ಕಾಯಿಗಳು ರೂಪುಗೊಳ್ಳುವ ಹಂತದಲ್ಲಿ ಹೆಚ್ಚಿನ ಉಷ್ಣತೆ ಕಂಡುಬಂದರೆ, ಮರದ ಒಳಗಿನ ನೀರಿನ ಅಂಶ ಕಡಿಮೆಯಾಗುತ್ತದೆ. ಇದರ ಪರಿಣಾಮವಾಗಿ ಮರದಲ್ಲಿನ ಕಾಯಿ ಉದುರುವ ಪ್ರಕ್ರಿಯೆ ಪ್ರಾರಂಭವಾಗುತ್ತದೆ. ಇದು ಸಹಜವಾಗಿ ಮರದ ರಕ್ಷಣಾತ್ಮಕ ಕ್ರಿಯೆಯಾದರೂ, ಬೆಳೆ ನಿರೀಕ್ಷೆಯಲ್ಲಿದ್ದ ರೈತರಿಗೆ ಇದು ದೊಡ್ಡ ನಷ್ಟಕ್ಕೆ ಕಾರಣವಾಗುತ್ತದೆ.

ಮಣ್ಣಿನ ತೇವಾಂಶ ಇಲ್ಲದಿರುವುದು ಈ ಸಮಸ್ಯೆಗೆ ಇನ್ನೊಂದು ಪ್ರಮುಖ ಕಾರಣವಾಗಿದೆ. ತಾಪಮಾನ ಹೆಚ್ಚಿದಂತೆ ಭೂಮಿಯಲ್ಲಿನ ನೀರಿನ ಅಂಶ ಆವಿಯಾಗುವ ಪ್ರಮಾಣವೂ ಹೆಚ್ಚುತ್ತದೆ. ಇದರಿಂದ ಬೇರುಗಳಿಗೆ ಅಗತ್ಯವಾದ ನೀರು ಲಭ್ಯವಾಗುವುದಿಲ್ಲ. ನೀರಿನ ಕೊರತೆಯಿಂದ ಮರದಲ್ಲಿ ಪೋಷಕಾಂಶಗಳ ಸಾಗಣೆ ಕುಂಠಿತವಾಗುತ್ತದೆ. ಹೀಗಾಗಿ, ಕಾಯಿಯ ಬೆಳವಣಿಗೆಗೆ ಬೇಕಾದ ಶಕ್ತಿ ದೊರೆಯದೆ ಉದುರುತ್ತವೆ.

ಇದಲ್ಲದೆ, ಬಿಸಿಗಾಳಿಯ ಪರಿಣಾಮವೂ ಗಂಭೀರವಾಗಿದೆ. ಬಿಸಿಗಾಳಿ(ಹೀಟ್ ವೇವ್ಸ್) ಉಂಟಾದಾಗ ಮರದ ಎಲೆಗಳು ಒಣಗುತ್ತವೆ, ಫೋಟೋಸಿಂಥಸಿಸ್ ಕ್ರಿಯೆ ಕುಂಠಿತವಾಗುತ್ತದೆ. ಇದರ ಪರಿಣಾಮವಾಗಿ ಆಹಾರ ಉತ್ಪಾದನೆ ಕಡಿಮೆಯಾಗುತ್ತದೆ. ಆಹಾರದ ಕೊರತೆಯಿಂದ ಮರವು ಎಲ್ಲ ಕಾಯಿಗಳನ್ನು ತನ್ನಲ್ಲಿಯೇ ಉಳಿಸಿಕೊಳ್ಳಲು ಸಾಧ್ಯವಾಗುವುದಿಲ್ಲ. ಹೀಗಾಗಿ, ಕೆಲವು ಕಾಯಿಗಳು ಉದುರಿಹೋಗುತ್ತವೆ.

ಇತ್ತೀಚಿನ ಹವಾಮಾನ ಬದಲಾವಣೆಯ ಪರಿಣಾಮವಾಗಿ ಈ ಸಮಸ್ಯೆ ಮತ್ತಷ್ಟು ತೀವ್ರವಾಗಿದೆ. ಮಳೆಯ ಅನಿಯಮಿತತೆ, ಉಷ್ಣತೆಯ ಅಸಾಧಾರಣ ಏರಿಕೆ ಮತ್ತು ಗಾಳಿಯ ತೀವ್ರತೆ- ಈ ಎಲ್ಲ ಅಂಶಗಳು ಮಾವಿನ ಮರಗಳ ಮೇಲೆ ಒತ್ತಡ ಹೇರುತ್ತವೆ. ಇದರ ಪರಿಣಾಮವಾಗಿ ಮಾವಿನ ಉತ್ಪಾದನೆ ವರ್ಷದಿಂದ ವರ್ಷಕ್ಕೆ ಕುಸಿಯುತ್ತಿರುವುದು ಗಮನಾರ್ಹವಾಗಿದೆ.

ಈ ಸಮಸ್ಯೆಯಿಂದ ಬೆಳೆಗಾರರು ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ. ಒಂದು ಮಾವಿನ ತೋಟವನ್ನು ಬೆಳೆಸಲು ಸಾಕಷ್ಟು ಸಮಯ, ಹಣ ಮತ್ತು ಶ್ರಮ ಬೇಕಾಗುತ್ತದೆ. ಆದರೆ, ಫಲ ಕೊಡುವ ಸಮಯದಲ್ಲಿ ಕಾಯಿಗಳು ಉದುರಿದರೆ ರೈತರಿಗೆ ನಿರೀಕ್ಷಿತ ಆದಾಯ ದೊರೆಯುವುದಿಲ್ಲ. ಇದರಿಂದ ಸಾಲದ ಬಾಧೆ ಹೆಚ್ಚಾಗುವ ಸಾಧ್ಯತೆಯೂ ಇದೆ.

ಜೋನಿ ರೋಗದ ಹೊಡೆತ

ರಾಮನಗರ ಜಿಲ್ಲೆಯ ಸ್ಥಿತಿ ಮತ್ತಷ್ಟು ಚಿಂತಾಜನಕವಾಗಿದೆ. ಹೂವು ಚೆನ್ನಾಗಿ ಬಂದು ಉತ್ತಮ ಇಳುವರಿ ನಿರೀಕ್ಷೆ ಮೂಡಿಸಿದ್ದ ತೋಟಗಳು ಜೋನಿ ರೋಗಕ್ಕೆ ತುತ್ತಾಗಿದ್ದು, ಕಾಯಿ ಬೆಳವಣಿಗೆಯ ಹಂತದಲ್ಲೇ ದೊಡ್ಡ ಹಾನಿ ಉಂಟಾಗಿದೆ. ಈ ರೋಗದಿಂದ ಕಾಯಿಗಳ ಬೆಳವಣಿಗೆ ಕುಂಠಿತಗೊಂಡು ಉದುರುತ್ತಿವೆ. ಇದರಿಂದಾಗಿ ರೈತರು ನಿರೀಕ್ಷಿಸಿದ್ದ ಲಾಭ ಕ್ಷಣಾರ್ಧದಲ್ಲಿ ನಷ್ಟವಾಗಿ ಪರಿಣಮಿಸಿದೆ.

ರಾಜ್ಯದಲ್ಲಿಯೇ ಮಾವು ಬೆಳೆಯಲ್ಲಿ ಎರಡನೇ ಸ್ಥಾನ ಗಳಿಸಿರುವ ರಾಮನಗರದಲ್ಲಿ 27 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮಾವು ಬೆಳೆಯಲಾಗುತ್ತದೆ. ಮುಖ್ಯವಾಗಿ ಜಿಲ್ಲೆಯಲ್ಲಿ ಅತೀ ಹೆಚ್ಚು ಬಾದಾಮಿ ತಳಿಯ ಮಾವನ್ನೇ ಬೆಳೆಯಲಾಗುತ್ತದೆ. ಬರೋಬ್ಬರಿ 22,830 ಹೆಕ್ಟೇರ್ ವಿಸ್ತೀರ್ಣದಲ್ಲಿ ಬಾದಾಮಿ ಮಾವನ್ನು ಬೆಳೆಯಲಾಗುತ್ತದೆ. ಕಳೆದ ಬಾರಿ 1,96,690 ಮೆಟ್ರಿಕ್ ಟನ್ ಬಾದಾಮಿ ಇಳುವರಿ ಬಂದಿತ್ತು. ಆದರೆ ಈ ವರ್ಷ ಬಾದಾಮಿ ತಳಿಯ ಮಾವು ಕೈಕೊಟ್ಟಿದೆ. ಹಾಗಾಗಿ ಕೇವಲ 82,667 ಮೆಟ್ರಿಕ್ ಟನ್ ಇಳುವರಿ ಬರುವ ನಿರೀಕ್ಷೆಯಿದೆ. ಈ ಮೂಲಕ ಶೇ.60ಕ್ಕಿಂತ ಅಧಿಕ ಬಾದಾಮಿ ಇಳುವರಿ ಕುಂಠಿತವಾಗಲಿದೆ ಎಂದು ಅಂದಾಜಿಸಲಾಗಿದೆ.

ಇದರ ಬೆನ್ನಲ್ಲೇ ಹಲವಾರು ಬೆಳೆಗಾರರು ತಮ್ಮ ತೋಟಗಳಲ್ಲಿ ಶೇಕಡಾವಾರು ಪ್ರಮಾಣದಲ್ಲಿ ಕಾಯಿ ಉದುರುವಿಕೆಯನ್ನು ಗಮನಿಸಿ ಆತಂಕಗೊಂಡಿದ್ದು, ಜಿಲ್ಲೆಯ ಮಾವು ಬೆಳೆಗಾರರ ನಿಯೋಗವು ಉಪಮುಖ್ಯಮಂತ್ರಿ ಹಾಗೂ ಜಿಲ್ಲೆಯವರೇ ಆದ ಡಿ ಕೆ ಶಿವಕುಮಾರ್ ಅವರನ್ನು ಭೇಟಿಯಾಗಲು ತೀರ್ಮಾನಿಸಿದೆ. ಡಿಸಿಎಂ ಎದುರು ಮಾವು ಬೆಳೆಗಾರರ ಪರಿಸ್ಥಿತಿ ಮತ್ತು ಪಡಿಪಾಟಲುಗಳನ್ನು ಹೇಳಿಕೊಳ್ಳುವ ಮೂಲಕ ಸರ್ಕಾರದ ಮಟ್ಟದಲ್ಲಿ ಗಮನ ಸೆಳೆಯಲು ರೈತರು ಸಜ್ಜಾಗಿದ್ದಾರೆ.

ದಿನೇಶ್ ಬಿಳಗುಂಬ ಅವರು ಈ ದಿನ.ಕಾಮ್‌ನೊಂದಿಗೆ ಮಾತನಾಡಿ, ''ಈ ಬಾರಿ ವಿಪರೀತ ಬಿಸಿಲು ಇರುವ ಕಾರಣದಿಂದಾಗಿ ಮಾವಿನ ಬೆಳೆ ಜೋನಿ ರೋಗದ ಜತೆಗೆ ಇತರೆ ರೋಗಗಳು ಮತ್ತು ಕೀಟಗಳ ದಾಳಿಗೂ ಒಳಗಾಗಿದ್ದು, ಪರಿಸ್ಥಿತಿಯನ್ನು ಮತ್ತಷ್ಟು ಗಂಭೀರಗೊಳಿಸಿದೆ. ಬೂದಿರೋಗ, ಥ್ರಿಪ್ಸ್‌ಗಳ ದಾಳಿ ಹಾಗೂ ಹೂವು-ಕಾಯಿ ಉದುರುವಿಕೆ ಎಲ್ಲ ಸಮಸ್ಯೆಗಳಿಂದ ಇಳುವರಿ ಕುಗ್ಗುತ್ತಿದೆ. ತಾಪಮಾನ ಏರಿಕೆಯಿಂದ ಮರಗಳಲ್ಲಿನ ಆಹಾರ ಉತ್ಪಾದನೆ ಕುಂಠಿತವಾಗುವುದರಿಂದ, ಮರವು ಎಲ್ಲ ಕಾಯಿಗಳನ್ನು ತನ್ನಲ್ಲಿಯೇ ಉಳಿಸಿಕೊಳ್ಳಲು ಸಾಧ್ಯವಾಗುವುದಿಲ್ಲ. ಹೀಗಾಗಿ, ಕೆಲವು ಕಾಯಿಗಳನ್ನು ಬಿಟ್ಟುಬಿಡುತ್ತದೆ. ಆಗ ಕಾಯಿಗಳು ಉದುರಲಾರಂಭಿಸುತ್ತವೆ'' ಎಂದು ಹೇಳಿದರು.

''ಮಾವಿನ ತೋಟ ಬೆಳೆಸುವುದು ದೀರ್ಘಾವಧಿಯ ಹೂಡಿಕೆ. ಹಲವು ವರ್ಷಗಳ ಶ್ರಮ, ಹಣ ಮತ್ತು ನಿರೀಕ್ಷೆಗಳೊಂದಿಗೆ ಬೆಳೆಸಿದ ತೋಟಗಳಲ್ಲಿ ಕೊನೆಗೆ ಫಸಲು ಇಲ್ಲದಿರುವುದನ್ನು ನೋಡಿದಾಗ ತುಂಬಾ ಬೇಸರವಾಗುತ್ತದೆ. ರೈತರಿಗೆ ಬಂಡವಾಳವೂ ವಾಪಸ್ಸಾಗದ ಪರಿಸ್ಥಿತಿ ಉಂಟಾಗಿದೆ'' ಎಂದು ಕಳವಳ ವ್ಯಕ್ತಪಡಿಸಿದರು.

''ಈ ಮೊದಲು ಮಾವಿನ ಬೆಳೆಯನ್ನು ವಾಣಿಜ್ಯ ಬೆಳೆಯಾಗಿ ಅನುಸರಿಸುತ್ತಿದ್ದೆವು. ಎಲೆಗಳಿಂದ ಹಿಡಿದು ಸಣ್ಣ ಸಣ್ಣ ಕಾಯಿ, ಹಣ್ಣುಗಳವರೆಗೆ ಇದರಿಂದ ಒಳ್ಳೆ ಲಾಭ ಇರುತ್ತಿತ್ತು. ಈಗ ಮಳೆಯ ಕೊರತೆ, ವಿಪರೀತ ಬಿಸಿಲು ಇವೆಲ್ಲ ಒಂದು ಕಡೆಯಾದರೆ, ಮತ್ತೊಂದು ಕಡೆ ಔಷಧಿ ಸಿಂಪಡಿಸದೇ ಇದ್ದರೆ ಬೆಳೆಯನ್ನು ಉಳಿಸಿಕೊಳ್ಳಲು ಸಾಧ್ಯವಾಗುವುದೇ ಇಲ್ಲ. ಬಂದ ಬೆಳೆಗೆ ಸರಿಯಾದ ಬೆಲೆಯೂ ಸಿಗುವುದಿಲ್ಲ. ಅಡಕೆ-ತೆಂಗು ಬೆಳೆಗಳಿಗೆ ಸರ್ಕಾರ ನೆರವಾದಂತೆ ಮಾವು ಬೆಳೆಗೆ ಯಾವುದೇ ರೀತಿಯ ಆದ್ಯತೆ ನೀಡುವುದಿಲ್ಲ. ಇದರಿಂದಾಗಿ ರೈತರು ನಷ್ಟ ಅನುಭವಿಸುವ ಬದಲು ಮರಗಳನ್ನು ಕಟಾವು ಮಾಡಿ ಪರ್ಯಾಯ ಬೆಳೆಗಳಿಗೆ ಬದಲಾಗುತ್ತಿದ್ದಾರೆ'' ಎಂದು ಬೇಸರ ವ್ಯಕ್ತಪಡಿಸಿದರು.

''ಎರಡು ವರ್ಷದಿಂದಲೂ ಭಾರೀ ನಷ್ಟವಾಗುತ್ತಿದೆ. ಕಳೆದ ಬಾರಿಗೆ ಹೋಲಿಸಿದರೆ ಈ ಬಾರಿ ಜಿಲ್ಲೆಯಲ್ಲಿ ಶೇ.50ರಷ್ಟು ಇಳುವರಿ ಕುಂಠಿತವಾಗಿದೆ. ನನ್ನ ತೋಟದಲ್ಲಿಯೇ 150 ಮರಗಳಿವೆ. ಎರಡು ವರ್ಷಗಳಿಂದ ಒಂದೇ ಒಂದು ರೂಪಾಯಿ ಆದಾಯ ಇಲ್ಲ. ಔಷಧಿ ಗೊಬ್ಬರಕ್ಕೆ ಖರ್ಚು ಮಾಡುವುದನ್ನೂ ತೆಗೆದುಕೊಳ್ಳುವುದು ಕಷ್ಟವಾಗಿದೆ'' ಎಂದರು.

''ಕೀಟ, ರೋಗಬಾಧೆ ಹಾಗೂ ಹೂ, ಕಾಯಿ ಕಚ್ಚುವ ಸಮಯದಲ್ಲಿ ಉಂಟಾದ ನೀರಿನ ಕೊರತೆ, ಅಲ್ಲದೆ ಹೆಚ್ಚುತ್ತಿರುವ ಬಿಸಿಲು ಈ ಬಾರಿಯ ಫಸಲಿನ ಮೇಲೆ ಗಂಭೀರ ಪರಿಣಾಮ ಬೀರಿದೆ. ನಿರೀಕ್ಷಿತ ಪ್ರಮಾಣದಲ್ಲಿ ಕಾಯಿ ಕಟ್ಟದ ಕಾರಣ ಶೇ. 50ಕ್ಕಿಂತಲೂ ಅಧಿಕ ಇಳುವರಿ ಕುಸಿದಿದೆ. ರೈತರು ಮಾವಿನ ಬೆಳೆ ನಿರ್ವಹಣೆಗೆ ಮಾಡಿದ್ದ ಸಾಲವನ್ನು ಹೇಗೆ ತೀರಿಸುವುದು ಎಂಬ ಆತಂಕದಲ್ಲಿದ್ದಾರೆ'' ಎಂದು ಜಿಲ್ಲಾ ಮಾವು ಮತ್ತು ತೆಂಗು ಬೆಳೆ ರೈತ ಉತ್ಪಾದಕರ ಕಂಪೆನಿ ಅಧ್ಯಕ್ಷ ಧರಣೇಶ್ ಕುಮಾರ್ ಹೇಳಿದ್ದಾರೆ.

ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಸಮಗ್ರ ಕ್ರಮಗಳು ಅಗತ್ಯವಾಗಿದೆ. ಮೊದಲನೆಯದಾಗಿ, ತೋಟಗಳಲ್ಲಿ ನೀರಿನ ಸಮರ್ಪಕ ನಿರ್ವಹಣೆ ಅತ್ಯಂತ ಮುಖ್ಯ. ಡ್ರಿಪ್ ಇರಿಗೇಶನ್ ಪದ್ಧತಿ ಬಳಸಿ ನೀರನ್ನು ಸಮರ್ಥವಾಗಿ ಬಳಸಬೇಕು. ಮಲ್ಚಿಂಗ್ ವಿಧಾನದಿಂದ ಮಣ್ಣಿನ ತೇವಾಂಶವನ್ನು ಕಾಪಾಡಬೇಕು. ಎರಡನೆಯದಾಗಿ, ಜೋನಿ ರೋಗ ನಿಯಂತ್ರಣಕ್ಕೆ ಬೇವಿನ ಎಣ್ಣೆ ಸಿಂಪಡಣೆ ಮತ್ತು ಸಮಗ್ರ ಕೀಟ ನಿರ್ವಹಣಾ ಕ್ರಮಗಳನ್ನು ಅನುಸರಿಸಬೇಕು. ಮೂರನೆಯದಾಗಿ, ತಾಪಮಾನವನ್ನು ನಿಯಂತ್ರಿಸಲು ಮರಗಳಿಗೆ ಸೂಕ್ತ ನೆರಳು ಒದಗಿಸುವುದು ಅಥವಾ ಗಾಳಿಯ ತೀವ್ರತೆಯನ್ನು ಕಡಿಮೆ ಮಾಡುವ ಕ್ರಮಗಳನ್ನು ಕೈಗೊಳ್ಳಬೇಕು. ಜತೆಗೆ, ಸಸ್ಯಾಹಾರ ಪೋಷಕಾಂಶಗಳನ್ನು ಸರಿಯಾದ ಸಮಯದಲ್ಲಿ ನೀಡುವುದರಿಂದ ಮರದ ಆರೋಗ್ಯವನ್ನು ಸುಧಾರಿಸಬಹುದು. ವಿಶೇಷವಾಗಿ ಪೊಟಾಷಿಯಂ ಮತ್ತು ಬೋರಾನ್ ಅಂಶಗಳು ಕಾಯಿ ಹಿಡಿತವನ್ನು ಹೆಚ್ಚಿಸಲು ಸಹಕಾರಿಯಾಗುತ್ತವೆ ಎಂಬುದು ಕೃಷಿ ತಜ್ಞರ ಅಭಿಪ್ರಾಯವಾಗಿದೆ.

ಇದಲ್ಲದೆ, ರೈತರಿಗೆ ಸಮಯಕ್ಕೆ ಸರಿಯಾದ ಹವಾಮಾನ ಮಾಹಿತಿ ಒದಗಿಸುವುದು ಬಹಳ ಮುಖ್ಯ. ಮುಂಚಿತ ಎಚ್ಚರಿಕೆ ವ್ಯವಸ್ಥೆಗಳು ಇದ್ದರೆ, ರೈತರು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಲು ಸಾಧ್ಯವಾಗುತ್ತದೆ. ಸರ್ಕಾರ ಮತ್ತು ತೋಟಗಾರಿಕೆ ಇಲಾಖೆ ಈ ದಿಕ್ಕಿನಲ್ಲಿ ಹೆಚ್ಚಿನ ಗಮನ ಹರಿಸಬೇಕಾಗಿದೆ.

ಒಟ್ಟಿನಲ್ಲಿ, ತಾಪಮಾನದ ತೀವ್ರ ಏರಿಕೆ, ಅಕಾಲಿಕ ಮಳೆ ಮತ್ತು ಜೋನಿ ರೋಗದ ಕಾಟದಿಂದ ಮಾವಿನ ತೋಟಗಳು ತುತ್ತಾಗಿವೆ. ಇದು ಕೇವಲ ಬೆಳೆ ನಷ್ಟದ ಸಮಸ್ಯೆಯಲ್ಲ, ರೈತರ ಬದುಕಿನ ಪ್ರಶ್ನೆಯಾಗಿದೆ. ಈ ಸಂಕಷ್ಟವನ್ನು ಸಮರ್ಥವಾಗಿ ಎದುರಿಸಲು ವಿಜ್ಞಾನಾಧಾರಿತ ಕೃಷಿ ವಿಧಾನಗಳು, ಸರ್ಕಾರಿ ಬೆಂಬಲ ಮತ್ತು ರೈತರ ಜಾಗೃತಿ ಅಗತ್ಯವಾಗಿದೆ. ಇಲ್ಲವಾದರೆ, ಹಣ್ಣುಗಳ ರಾಜ ಎಂದು ಕರೆಯಲ್ಪಡುವ ಮಾವು ಬೆಳೆಗಾರರು ನಷ್ಟಕ್ಕೊಳಗಾಗುವ ಸಾಧ್ಯತೆ ಅಧಿಕವಾಗಿದೆ.

ಇರಾನ್ ಶಾಂತಿ ಮಾತುಕತೆಗೆ ಪಾಕ್‌ಗೆ ಆಗಮಿಸುತ್ತಿದ್ದಾರೆಯೇ ಅಮೆರಿಕ ಅಧ್ಯಕ್ಷ ಟ್ರಂಪ್?

ಇರಾನ್ ಜೊತೆಗೆ ಶಾಂತಿ ಮಾತುಕತೆಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಪಾಕಿಸ್ತಾನಕ್ಕೆ ಆಗಮಿಸುತ್ತಿದ್ದಾರೆಯೇ? ಇಂತಹದೊಂದು ಪ್ರಶ್ನೆ ಈಗ ಜಾಗತಿಕ ರಾಜತಾಂತ್ರಿಕ ವಲಯದಲ್ಲಿ ತೀವ್ರ ಕುತೂಹಲ ಮೂಡಿಸಿದೆ. ಆದರೆ, ಇದರ ಬೆನ್ನಲ್ಲೇ ಅಮೆರಿಕದೊಂದಿಗಿನ ಶಾಂತಿ ಮಾತುಕತೆಯಿಂದ ಇರಾನ್ ದಿಢೀರ್ ಹಿಂದೆ ಸರಿದಿದ್ದು, ಜಾಗತಿಕ ತೈಲ ಸಾಗಣೆಯ ಪ್ರಮುಖ ಮಾರ್ಗವಾದ ಹಾರ್ಮುಜ್ ಜಲಸಂಧಿಯನ್ನು ಮತ್ತೆ ಮುಚ್ಚುವುದಾಗಿ ಘೋಷಿಸಿದೆ ಎಂದು ಡೆಕ್ಕನ್ ಹೆರಾಲ್ಡ್ ವರದಿ ಮಾಡಿದೆ.

ಪಾಕಿಸ್ತಾನದ ರಾಜಧಾನಿ ಇಸ್ಲಾಮಾಬಾದ್‌ನಲ್ಲಿ ಅಮೆರಿಕ ಮತ್ತು ಇರಾನ್ ನಡುವೆ ಮಹತ್ವದ ಶಾಂತಿ ಮಾತುಕತೆ ನಿಗದಿಯಾಗಿತ್ತು. ಆದರೆ, ಅಮೆರಿಕವು ತನ್ನ ನೌಕಾ ದಿಗ್ಬಂಧನವನ್ನು ಮುಂದುವರಿಸಿರುವವರೆಗೆ ಯಾವುದೇ ನಿಯೋಗವನ್ನು ಕಳುಹಿಸುವುದಿಲ್ಲ ಎಂದು ಇರಾನ್ ಕಡ್ಡಿ ಮುರಿದಂತೆ ಸ್ಪಷ್ಟಪಡಿಸಿದೆ. ಈ ಹಿಂದೆ ಮಾತುಕತೆಯ ನಿಯೋಗದ ನೇತೃತ್ವ ವಹಿಸಿದ್ದ ಇರಾನ್ ಸಂಸತ್ತಿನ ಸ್ಪೀಕರ್ ಮೊಹಮ್ಮದ್ ಬಘೇರ್ ಘಾಲಿಬಾಫ್ ಹಾಗೂ ಅಲ್ಲಿನ ಪ್ರಭಾವಿ ನಾಯಕ ಮೊಜ್ತಾಬಾ ಖಮೇನಿ ಅವರ ನಿಲುವು ಈ ಬಿಕ್ಕಟ್ಟಿನಲ್ಲಿ ನಿರ್ಣಾಯಕವಾಗಿದೆ ಎಂದು ಹೇಳಲಾಗುತ್ತಿದೆ.

ಜಾಗತಿಕ ತೈಲ ಮತ್ತು ವಾಣಿಜ್ಯ ಸರಕು ಸಾಗಣೆಯ ಪ್ರಮುಖ ಕೊಂಡಿಯಾಗಿರುವ ಹಾರ್ಮುಜ್ ಜಲಸಂಧಿಯನ್ನು ಇರಾನ್ ಮತ್ತೆ ತನ್ನ ಸಂಪೂರ್ಣ ಸುಪರ್ದಿಗೆ ತೆಗೆದುಕೊಂಡಿದೆ. ಅಮೆರಿಕ ತನ್ನ ಭರವಸೆಗಳನ್ನು ಮುರಿದು ನೌಕಾಪಡೆಯ ಮೂಲಕ ಒತ್ತಡ ಹೇರುತ್ತಿದೆ ಎಂದು ಆರೋಪಿಸಿರುವ ಇರಾನ್, ಈ ಮಾರ್ಗದಲ್ಲಿ ಸರಕು ಹಡಗುಗಳ ಸಂಚಾರವನ್ನು ಕಟ್ಟುನಿಟ್ಟಾಗಿ ನಿರ್ಬಂಧಿಸಿದೆ. ಇದು ಸಹಜವಾಗಿಯೇ ಜಾಗತಿಕ ತೈಲ ಬೆಲೆಗಳ ಮೇಲೆ ಗಂಭೀರ ಪರಿಣಾಮ ಬೀರುವ ಆತಂಕವನ್ನು ಸೃಷ್ಟಿಸಿದೆ.



ಇತ್ತ ಶಾಂತಿ ಮಾತುಕತೆಯ ಬಿಕ್ಕಟ್ಟಿನ ನಡುವೆಯೇ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಕಳೆದ ವರ್ಷ ಇರಾನ್‌ನ ಪರಮಾಣು ನೆಲೆಗಳ ಮೇಲೆ ಅಮೆರಿಕ ನಡೆಸಿದ್ದ ಆಪರೇಷನ್ ಮಿಡ್‌ನೈಟ್ ಹ್ಯಾಮರ್ ಕಾರ್ಯಾಚರಣೆಯನ್ನು ಮತ್ತೊಮ್ಮೆ ಬಲವಾಗಿ ಸಮರ್ಥಿಸಿಕೊಂಡಿದ್ದಾರೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ಅವರು, ''ಈ ಕಾರ್ಯಾಚರಣೆಯಿಂದ ಇರಾನ್‌ನ ಪರಮಾಣು ನೆಲೆಗಳು ಸಂಪೂರ್ಣವಾಗಿ ನಾಶವಾಗಿವೆ. ಅಲ್ಲಿನ ಪರಮಾಣು ಅವಶೇಷಗಳನ್ನು ಹೊರತೆಗೆಯುವುದು ಬಹಳ ಸುದೀರ್ಘ ಹಾಗೂ ಕಷ್ಟಕರ ಪ್ರಕ್ರಿಯೆ'' ಎಂದು ಹೇಳಿದ್ದಾರೆ.

ಒಂದು ವೇಳೆ ಟ್ರಂಪ್ ಅವರ ಪಾಕಿಸ್ತಾನ ಭೇಟಿ ಖಚಿತವಾದರೆ, ಅದು ಈ ಬಿಕ್ಕಟ್ಟನ್ನು ಬಗೆಹರಿಸುವ ನಿಟ್ಟಿನಲ್ಲಿ ಬಹುದೊಡ್ಡ ರಾಜತಾಂತ್ರಿಕ ಯತ್ನವಾಗಲಿದೆ. ಆದಾಗ್ಯೂ, ಇರಾನ್‌ನ ಕಠಿಣ ನಿಲುವು ಪಶ್ಚಿಮ ಏಷ್ಯಾದಲ್ಲಿ ಮತ್ತೆ ಸಂಘರ್ಷದ ಕಾರ್ಮೋಡವನ್ನು ದಟ್ಟವಾಗಿಸಿದೆ. ಮಾತುಕತೆ ಸಂಪೂರ್ಣವಾಗಿ ವಿಫಲವಾದರೆ ಜಾಗತಿಕ ಆರ್ಥಿಕತೆಯ ಮೇಲೆ, ವಿಶೇಷವಾಗಿ ತೈಲ ಮಾರುಕಟ್ಟೆಯ ಮೇಲೆ ಭಾರೀ ಹೊಡೆತ ಬೀಳುವ ಸಾಧ್ಯತೆಯಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR